# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 30 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 07-08-2026 ಪುಟ : 04 ಬೆಲೆ : 2-00


## ರಾಜ್ಯ ಸರ್ಕಾರಿ ನೌಕರರಿಗೆ ಬಿಗ್ ಶಾಕ್: ಆಗಸ್ಟ್ 20ರಿಂದ ಆಸ್ತಿ ವಿವರ ಆನ್‌ಲೈನ್‌ನಲ್ಲಿ ಸಲ್ಲಿಕೆ ಕಡ್ಡಾಯ..!

ಬೆಂಗಳೂರು: ರಾಜ್ಯ ಸರ್ಕಾರಿ ಅಧಿಕಾರಿಗಳು ಹಾಗೂ ನೌಕರರು ಇನ್ನು ಮುಂದೆ ವಾರ್ಷಿಕ ಕಾರ್ಯಕ್ಷಮತೆ ಮೌಲ್ಯಮಾಪನ ವರದಿ ಮತ್ತು ಸ್ಥಿರಾಸ್ತಿ ವಿವರಗಳ ಸಲ್ಲಿಕೆಯನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಸಲ್ಲಿಸಬೇಕು ಎಂದು ರಾಜ್ಯ ಸರ್ಕಾರ ಆದೇಶಿಸಿದೆ.

ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ. ಹೊಸ ಆದೇಶದ ಪ್ರಕಾರ, 2026ರ ಆಗಸ್ಟ್ 20ರಿಂದ ರಾಜ್ಯದ e-PAR Application ಮೂಲಕವೇ ಸಲ್ಲಿಕೆ ಮಾಡಬೇಕು.

ಈ ಉದ್ದೇಶಕ್ಕಾಗಿ e-PAR ವೇದಿಕೆಯಲ್ಲಿ IPR Module ಅನ್ನು ಪರಿಚಯಿಸಲಾಗಿದ್ದು, ಇದರ ಮೂಲಕ ವಾರ್ಷಿಕ ಆಸ್ತಿ ಮತ್ತು ಇತರೆ ವಿವರವನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಡಿಪಿಎಆರ್ ಅಧಿಕಾರಿಗಳ ಪ್ರಕಾರ, ಇದೂವರೆಗೆ ಈ ಪ್ರಕ್ರಿಯೆಯನ್ನು ಕೈಬರಹದ (ಮ್ಯಾನುಯಲ್) ಮೂಲಕ ನಡೆಸಲಾಗುತ್ತಿತ್ತು. ಅದು ಸಮಯ ತೆಗೆದುಕೊಳ್ಳುವ ಮತ್ತು ಸಂಕೀರ್ಣ ಪ್ರಕ್ರಿಯೆಯಾಗಿತ್ತು. ಈಗ ಡಿಜಿಟಲ್

2ನೇ ಪುಟಕ್ಕೆ...



## ಮೋದಿ ವಿದೇಶ ಪ್ರವಾಸಗಳಿಗೆ 2025ರಲ್ಲಿ 180 ಕೋಟಿ ವೆಚ್ಚ


ನವದೆಹಲಿ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 2025ರಲ್ಲಿ ಅಮೆರಿಕ, ಬ್ರಿಟನ್, ಫ್ರಾನ್ಸ್, ಚೀನಾ ಮತ್ತು ಜಪಾನ್ ಸೇರಿದಂತೆ 23 ದೇಶಗಳಿಗೆ ಕೈಗೊಂಡ ಪ್ರವಾಸಗಳಿಗೆ 180 ಕೋಟಿ ರೂ. ವೆಚ್ಚವಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ರಾಜ್ಯಸಭಾ ಸಂಸದರಾದ ಸಂಜಯ್ ಸಿಂಗ್ ಮತ್ತು ಡಾ. ವಿ. ಶಿವದಾಸನ್ ಅವರು ಕೇಳಿದ ಚುಕ್ಕೆ ಗುರುತಿಲ್ಲದ ಪ್ರಶ್ನೆಗೆ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಪಬಿತ್ರ ಮಾರ್ಗರೆಟಾ ಅವರು ಲಿಖಿತ ಉತ್ತರ ನೀಡಿದ್ದಾರೆ. 2021 ರಿಂದ ಪ್ರಧಾನಿ ಕೈಗೊಂಡ ದೇಶವಾರು ಪ್ರವಾಸಗಳು, ಪ್ರತಿ ಪ್ರವಾಸದ ವೆಚ್ಚ, ಸಹಿ ಮಾಡಲಾದ ದ್ವಿಪಕ್ಷೀಯ ಒಪ್ಪಂದಗಳು ಹಾಗೂ ಅದರಿಂದ ಹರಿದುಬಂದ ಎಫ್‌ಡಿಐ ಕುರಿತು ಸಂಸದರು ವಿವರಣೆ ಕೋರಿದ್ದರು.

ವರ್ಷಾವಾರು ಮಾಹಿತಿಯ ಪ್ರಕಾರ 2026ರಲ್ಲಿ ಇಲ್ಲಿಯವರೆಗೆ ಅವರ ವಿದೇಶಿ ಪ್ರವಾಸಗಳ ವೆಚ್ಚವು ಸುಮಾರು 74.58 ಕೋಟಿ ರೂ. ಆಗಿದೆ. ಇದರಲ್ಲಿ ಜುಲೈ 6 ರಿಂದ ಜುಲೈ 11 ರವರೆಗೆ ಇಂಡೋನೇಷ್ಯಾ, ಆಸ್ಟ್ರೇಲಿಯಾ ಮತ್ತು ನ್ಯೂಜಿಲ್ಯಾಂಡ್‌ಗೆ ಕೈಗೊಂಡ ಪ್ರವಾಸವೂ ಸೇರಿದೆ.

2025 ರಲ್ಲಿ ಮೋದಿ ಅವರು ಮಾರಿಷಸ್, ಥೈಲ್ಯಾಂಡ್, ಶ್ರೀಲಂಕಾ, ಸೈಪ್ರಸ್, ಕೆನಡಾ, ಕ್ರೊಯೇಷಿಯಾ, ಘಾನಾ, ಟ್ರಿನಿಡಾಡ್ ಮತ್ತು ಟೊಬಾಗೊ, ಅರ್ಜೆಂಟೀನಾ, ನಮೀಬಿಯಾ, ಮಾಲ್ಡೀವ್ಸ್, ಜಪಾನ್, ಭೂತಾನ್, ದಕ್ಷಿಣ ಆಫ್ರಿಕಾ, ಜೋರ್ಡಾನ್, ಒಮಾನ್ ಮತ್ತು ಇಥಿಯೋಪಿಯಾಗೆ ಭೇಟಿ ನೀಡಿದ್ದರು. 2025 ರ ಜುಲೈನಲ್ಲಿ ರಾಜ್ಯಸಭೆಯಲ್ಲಿ ನೀಡಲಾದ ಮತ್ತೊಂದು

2ನೇ ಪುಟಕ್ಕೆ..



# ಸಂಪುಟ ವಿಸ್ತರಣೆ ಕಿಚ್ಚು: ಬಂಡಾಯ ಶಾಸಕರ ಬೆಂಬಲಗರಿಂದ ಹಲವು ಕಡೆ ಬಂದ್; ಪ್ರತಿಭಟನೆ!



ಬೆಂಗಳೂರು: ಬಹುನಿರೀಕ್ಷಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ಕಳೆದ ಸೋಮವಾರ ವಿಸ್ತರಣೆಯಾಗಿದ್ದು, 19 ಕಾಂಗ್ರೆಸ್ ಶಾಸಕರು ನೂತನ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಇದರ ಬೆನ್ನಲ್ಲೇ ಸಚಿವಾಂಕ್ಷಿಗಳ ಆಕ್ರೋಶ ಭುಗಿಲೆದ್ದಿದ್ದು, ಹಲವು ಕಾಂಗ್ರೆಸ್ ಶಾಸಕರು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಪಕ್ಷದ ಹೈಕಮಾಂಡ್ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಅತೃಪ್ತ ಶಾಸಕರೊಂದಿಗೆ ಸಮನ್ವಯ ಸಭೆ ನಡೆಸಿದ್ದರೂ, ಗುರುವಾರ ಹಲವು ಕಾಂಗ್ರೆಸ್ ಶಾಸಕರ ಬೆಂಬಲಿಗರು ಬೀದಿಗಿಳಿದು ಪ್ರತಿಭಟನೆ ನಡೆಸಿದರು.

ಕೋಲಾರ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಕಾಂಗ್ರೆಸ್ ಶಾಸಕರ ಬೆಂಬಲಿಗರು ಪ್ರತಿಭಟನೆ ನಡೆಸಿದರು. ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರಿಗೆ ಸ್ಥಾನ ಸಿಗದಿದ್ದಕ್ಕೆ ಅವರ ಬೆಂಬಲಿಗರು ಬಂಗಾರಪೇಟೆ ಪಟ್ಟಣದಲ್ಲಿ ಬಂದ್ ಮಾಡಿ ಆಕ್ರೋಶ ವ್ಯಕ್ತಪಡಿಸಿದರು.

ಬಂಗಾರಪೇಟೆಯಲ್ಲಿ ವಾಣಿಜ್ಯ ಸಂಸ್ಥೆಗಳು ಮತ್ತು ಸಾರ್ವಜನಿಕ ಸಾರಿಗೆಯನ್ನು ಸಂಪೂರ್ಣ ಸ್ಥಗಿತಗೊಳಿಸಲಾಗಿತ್ತು. ಎಲ್ಲಾ ಅಗತ್ಯ ಸೇವೆ ಹೊರತುಪಡಿಸಿ


2ನೇ ಪುಟಕ್ಕೆ...



## ಸಾಂವಿಧಾನಿಕ ಹುದ್ದೆ ಹೈಜಾಕ್

### ಆ.14ಕ್ಕೆ ಸಭಾಪತಿ ಸ್ಥಾನಕ್ಕೆ ರಾಜೀನಾಮೆ: ಹೊರಟ್ಟಿ

ಬೆಂಗಳೂರು: ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಲು ಕೊನೆಗೂ ಒಪ್ಪಿಗೆ ನೀಡಿದ್ದು, ಆಗಸ್ಟ್ 14 ರಂದು ಅಧಿಕೃತವಾಗಿ ರಾಜೀನಾಮೆ ಸಲ್ಲಿಸುವುದಾಗಿ ಘೋಷಿಸಿದ್ದಾರೆ. ಆಗಸ್ಟ್ 13 ರಿಂದ ವಿಧಾನ ಮಂಡಲ ಅಧಿವೇಶನ ಪ್ರಾರಂಭವಾಗಲಿದ್ದು, ಮೊದಲ ದಿನ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ಕಲಾಪ ನಡೆಯಲಿದೆ. ಆಗಸ್ಟ್ 14 ರಂದು ಅಧಿವೇಶನದ ಎರಡನೇ ದಿನ ಉಪ ಸಭಾಪತಿ ಸ್ಥಾನಕ್ಕೆ ಚುನಾವಣೆ ನೆರವೇರಿದ ತಕ್ಷಣವೇ ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಹೊರಟ್ಟಿ ತಿಳಿಸಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಆ ಸ್ಥಾನದಿಂದ ಬದಲಾಯಿಸದಂತೆ ರಾಜ್ಯ



ಸರ್ಕಾರದ ಪ್ರಮುಖ ಸಚಿವರಾದ ಸತೀಶ್ ಜಾರಕಿಹೊಳಿ, ಚೆಲುವರಾಯಸ್ವಾಮಿ, ಜಮೀರ್ ಅಹಮದ್ ಖಾನ್, ಯು.ಟಿ.


-2ನೇ ಪುಟಕ್ಕೆ..

## ನನ್ನೊಂದಿಗೆ ವಿಡಿಯೋ ಮಾಡಲು ಸಿದ್ಧರಾಗಿ ಫ್ರೆಂಡ್ಸ್‌ಗೆ ನಮೋ ಸಂದೇಶ



ನವದೆಹಲಿ: ರಾಷ್ಟ್ರೀಯ ಕೈಮಗ್ಗ ದಿನದ ಅಂಗವಾಗಿ ಯುವಕರು ಕೈಮಗ್ಗ ಉಡುಪುಗಳನ್ನ ಧರಿಸಿ ಗೆಟ್ ರೆಡಿ ವಿತ್ ಮೀ ಶೈಲಿಯ ವಿಡಿಯೋಗಳನ್ನ ತಯಾರಿಸಿ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಈ ಮೂಲಕ ಭಾರತದ ಶ್ರೀಮಂತ ಕೈಮಗ್ಗ ಪರಂಪರೆಯನ್ನ ಜಗತ್ತಿಗೆ ಪರಿಚಯಿಸುವುದರ ಜೊತೆಗೆ ನೇಕಾರರ ಕುಟುಂಬಗಳಿಗೆ ಬೆಂಬಲ ನೀಡಬಹುದೆಂದು ಅವರು ಹೇಳಿದ್ದಾರೆ. ಆ.7 ರಂದು ಆಚರಿಸಲಿರುವ ರಾಷ್ಟ್ರೀಯ ಕೈಮಗ್ಗ ದಿನದ ಹಿನ್ನೆಲೆಯಲ್ಲಿ ಗುರುವಾರ ತಮ್ಮ ಇನ್‌ಸ್ಟಾಗ್ರಾಮ್ ರೀಲ್‌ನಲ್ಲಿ ಮಾತನಾಡಿದ ಮೋದಿ, 1905ರ ಆಗಸ್ಟ್ 7ರಂದು ಸ್ವದೇಶಿ ಚಳವಳಿಗೆ ಚಾಲನೆ ದೊರೆತ ಐತಿಹಾಸಿಕ ದಿನವನ್ನ ಸ್ಮರಿಸಿದರು.

## Gen Z ದೇಶದ್ರೋಹಿಗಳಲ್ಲ : ಭಾಗವತ್



ಮುಂಬೈ: ಪ್ರತಿಭಟನೆ ನಡೆಸುವ ಜೆನ್ ಝಿಗಳನ್ನು ದೇಶದ್ರೋಹಿಗಳು ಎಂದು ಕರೆಯಲು ಸಾಧ್ಯವಿಲ್ಲ, ಅವರು ನಮ್ಮದೇ ಮುಂದಿನ ಪೀಳಿಗೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್‌ಹೇಳಿದ್ದಾರೆ. ಮುಂಬೈನಲ್ಲಿ Gen Z ಮತ್ತು Gen Alpha ಪೀಳಿಗೆಯನ್ನು ಉದ್ದೇಶಿಸಿ ಮಾತನಾಡಿದ ಅವರು, Gen Z ಯುವಕರು ಯಾವುದಾದರೂ ಪ್ರತಿಭಟನೆಯಲ್ಲಿ ತೊಡಗಿಸಿಕೊಂಡರೆ, ಅವರು ದೇಶದ್ರೋಹಿಗಳಲ್ಲ (Anti Nationals) ಎಂಬುದನ್ನು ನಾನು ಸ್ಪಷ್ಟಪಡಿಸಲು ಬಯಸುತ್ತೇನೆ. ಅವರು ನಮ್ಮದೇ ಜನರು, ನಮ್ಮ ಮುಂದಿನ ಪೀಳಿಗೆ ಎಂದು ತಿಳಿಸಿದರು.

2ನೇ ಪುಟಕ್ಕೆ...

## ಬಾಗಲಕೋಟೆ ಕಾಂಗ್ರೆಸ್ ಆಡಿಯೋ ಬಾಂಬ್:

### ಸಚಿವ ಸಂಪುಟ ವಿಸ್ತರಣೆ ಬೆನ್ನಲ್ಲೇ ಡಿಕೆಶಿ ಸರ್ಕಾರಕ್ಕೆ ಭಾರಿ ಮುಜುಗರ..!

ಬೆಂಗಳೂರು / ಬಾಗಲಕೋಟೆ: ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಬೆನ್ನಲ್ಲೇ ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ಆಡಿಯೋ ಸೋರಿಕೆ ಭಾರಿ ಮುಜುಗರ ತಂದಿಟ್ಟಿದೆ. ಮಾಜಿ ಸಚಿವ ಆರ್.ಬಿ. ತಿಮ್ಮಾಪುರ ಹಾಗೂ ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ. ನಂಜಯ್ಯನಮಠ ಅವರ ನಡುವೆ ನಡೆದಿದೆ ಎನ್ನಲಾದ 5 ನಿಮಿಷಗಳ ಖಾಸಗಿ ದೂರವಾಣಿ ಸಂಭಾಷಣೆಯ ಆಡಿಯೋ ಕ್ಲಿಪ್ ಈಗ ರಾಜ್ಯ ರಾಜಕಾರಣದಲ್ಲಿ ಭಾರಿ ಬಿರುಗಾಳಿ ಎಬ್ಬಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಈ ಆಡಿಯೊದ ಸತ್ಯಾಸತ್ಯತೆಯನ್ನು ಸ್ವತಂತ್ರವಾಗಿ ದೃಢೀಕರಿಸಲಾಗಿಲ್ಲ. ಆದರೆ, ಅದರಲ್ಲಿ ಸಚಿವ ಸಂಪುಟದಲ್ಲಿ ಅವಕಾಶ ಸಿಗದ ಬಗ್ಗೆ ಇಬ್ಬರು ನಾಯಕರು ಅಸಮಾಧಾನ ವ್ಯಕ್ತಪಡಿಸಿರುವುದು ಹಾಗೂ ಸಚಿವ ಸ್ಥಾನ ಹಂಚಿಕೆ ಕುರಿತು ಕಾಂಗ್ರೆಸ್ ಹೈಕಮಾಂಡ್‌ನ ನಿರ್ಧಾರವನ್ನು ಪ್ರಶ್ನಿಸಿರುವುದು ಕೇಳಿ ಬಂದಿದೆ. ಆಡಿಯೊದಲ್ಲಿ ಕೆಲವು ನಾಯಕರನ್ನು ಸಚಿವ ಸಂಪುಟಕ್ಕೆ ಸೇರಿಸಿರುವುದನ್ನು ಟೀಕಿಸಲಾಗಿದ್ದು,

2ನೇ ಪುಟಕ್ಕೆ...

## ಕೃಷಿ ಅಧಿಕಾರಿ ನೇಮಕಾತಿ ಪರೀಕ್ಷೆ ತಾತ್ಕಾಲಿಕ ಮುಂದೂಡಿಕೆ: ಸಚಿವ ಪ್ರಿಯಾಂಕ್ ಖರ್ಗೆ

ಬೆಂಗಳೂರು: ಸಾಕಷ್ಟು ವಿವಾದಕ್ಕೆ ಕಾರಣವಾಗಿದ್ದ ಕೃಷಿ ಅಧಿಕಾರಿ ಹಾಗೂ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿ ಪರೀಕ್ಷೆಯನ್ನ ಸರ್ಕಾರ ತಾತ್ಕಾಲಿಕವಾಗಿ ಮುಂದೂಡಿದೆ. ಆಗಸ್ಟ್ 8 ಮತ್ತು 9 ರಂದು ನಡೆಯಬೇಕಿದ್ದ ಲಿಖಿತ ಪರೀಕ್ಷೆಯನ್ನ ಮುಂದೂಡುವ ಮೂಲಕ ವಿದ್ಯಾರ್ಥಿಗಳ ಹೋರಾಟಕ್ಕೆ ಜಯ ಸಿಕ್ಕಿದೆ. ಕೃಷಿ ಅಧಿಕಾರಿ ಹುದ್ದೆ ನೇಮಕಾತಿ ನಿಯಮಗಳ ಸಂಬಂಧ ಪ್ರತಿಭಟನೆ ಫ್ರೀಡಂ ಪಾರ್ಕಿನಲ್ಲಿ ನಡೆಯುತ್ತಿದ್ದ ಮುಷ್ಕರ ನಿರತರಾಗಿರುವ ಜಿಕೆವಿಕೆ ಕೃಷಿ ವಿಶ್ವವಿದ್ಯಾಲಯ ವಿದ್ಯಾರ್ಥಿಗಳನ್ನು ಇಂದು ಸಚಿವ ಪ್ರಿಯಾಂಕ್ ಖರ್ಗೆ ಭೇಟಿಯಾದ್ರು. ವಿದ್ಯಾರ್ಥಿಗಳ ಬೇಡಿಕೆಗಳನ್ನು ಆಲಿಸಿದ ಸಚಿವರು, ನಮ್ಮ ಕೃಷಿ ಪದವೀಧರರಿಗೆ ಕಿಂಚಿತ್ತೂ ಅನ್ಯಾಯವಾಗದಂತೆ, ಪರೀಕ್ಷೆ ನಡೆಸಲು ದೃಢಸಂಕಲ್ಪ ಮಾಡಿದೆ ಎಂದು ಸಿಎಂ ಸಂದೇಶವನ್ನ ವಿದ್ಯಾರ್ಥಿಗಳ ಗಮನಕ್ಕೆ ತಂದರು.



# ಮೌಲ್ಯ ವರ್ಧನೆಯಿಂದ ಮಾತ್ರ ಕೃಷಿಕ ಸುಭಿಕ್ಷವಾಗಿರಲು ಸಾಧ್ಯ

## ಬರ ಹಿಮ್ಮೆಟ್ಟಿಸಲು ಗಿಡ ಮರಗಳನ್ನು ಬೆಳೆಸಿ - ನೆಮ್ಮದಿ ಕೃಷಿಕ ವಸಂತ್ ಮಾಲವಿ ಸಲಹೆ



ಹಗರಿಬೊಮ್ಮನಹಳ್ಳಿ : ಬರ ಹಿಮ್ಮೆಟ್ಟಿಸಲು ಗಿಡ ಮರಗಳಾಧರಿತ ಕೃಷಿಯಿಂದ ಮಾತ್ರ ಸಾಧ್ಯವೆಂದು ನೆಮ್ಮದಿ ಕೃಷಿ ಪದ್ಧತಿಯನ್ನು ಹುಟ್ಟು ಹಾಕಿದ ಅನುಭವಿ ಕೃಷಿಕ ವಸಂತ್ ಮಾಲವಿ ರೈತರುಗಳಿಗೆ ಸಲಹೆ ನೀಡಿದರು.

ತಾಲ್ಲೂಕಿನಲ್ಲಿಯ ಅವರ ಮ್ಯಾನೋರ್ ಫಾರ್ಮ್ ಗೆ ಇಂದು ಕೂಡ್ಲಿಗಿ ತಾಲೂಕಿನ ತೋಟಗಾರಿಕಾ ಇಲಾಖೆ, ಪರಂಪರಾಗತ ಕೃಷಿ ವಿಕಾಸ ಯೋಜನೆ ಮತ್ತು ಮಂಡ್ಯದ ಕರ್ಟಸಿ ಇಂಡಿಯಾ ಸಂಸ್ಥೆಯ ಸಹಯೋಗದೊಂದಿಗೆ ರೈತರಿಗೆ ಅಧ್ಯಯನ ಪ್ರವಾಸದಡಿ ಹುಲಿಕೆರೆ ಮತ್ತು ಸಕಲಾಪುರದ ಹಟ್ಟಿ ಯಿಂದ ಆಗಮಿಸಿದ 50 ಕ್ಕೂ ಹೆಚ್ಚು ಆಸಕ್ತ ರೈತರನ್ನುದ್ದೇಶಿಸಿ ಅವರು ಮಾತನಾಡಿದರು.

ಕಳೆದ ಮೂವತ್ತು ವರ್ಷಗಳಿಂದ ವಿಭಿನ್ನ ಕೃಷಿ ಪದ್ಧತಿಗಳನ್ನು ರೈತರಿಗೆ ಪರಿಚಯಿಸುತ್ತಿರುವ ಮಾಲವಿ ತಮ್ಮ ತೋಟದಲ್ಲಿ ಕೈಗೊಂಡಿರುವ ಪ್ರತಿ ಪದ್ಧತಿಯೂ ರೈತರಿಗೆ ಅವಶ್ಯ ಎನ್ನುವಷ್ಟರ ಮಟ್ಟಿಗೆ ಪ್ರಭಾವಿತವಾಗಿವೆ. ಪ್ರಾರಂಭದಲ್ಲಿ ಸಹಜ ಕೃಷಿ, ನಂತರ ಸಾಂಪ್ರದಾಯಿಕ ಕೃಷಿ, ತದನಂತರ ಸಾವಯವ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಂಡು ಬಂದಿದ್ದ ಅವರು ಕಳೆದ ಎಂಟು ವರ್ಷಗಳಿಂದ "ನೆಮ್ಮದಿ ಕೃಷಿ" ಪದ್ಧತಿಯನ್ನು ಆಚರಿಸಿಕೊಂಡು ಬರುತ್ತಿರುವ ಅವರ ತೋಟ ಮರುಭೂಮಿಯ ಓಯಸಿಸ್ ನಂತಿದೆ ಎಂದಲೂ ಅತಿಶಯೋಕ್ತಿಯಾಗದು.

ಮ್ಯಾನೋರ್ ಫಾರ್ಮ್ ನಲ್ಲಿ ಬೆಳೆಯುವ 58 ತರಹದ ವೈವಿಧ್ಯಮಯವುಳ್ಳ ಪ್ರತಿ ಗಿಡಗಳ ಎಲೆ, ಹೂ, ಕಾಯಿ ಮತ್ತು ಹಣ್ಣುಗಳಿಂದ ಕೈಗೊಂಡಿರುವ ಮೌಲ್ಯವರ್ಧನೆಗಳ ಪಟ್ಟಿಯನ್ನು ರೈತರ ಮುಂದೆ ಬಿಚ್ಚಿಟ್ಟರು. ಅಲ್ಲದೇ ತಮ್ಮಲ್ಲಿ ಬೆಳೆದಿರುವ 20 ಕ್ಕೂ ಹೆಚ್ಚು ಔಷಧೀಯ ಸಸ್ಯಗಳು ಮತ್ತು ಕಳೆಯಲ್ಲಿ ಬರುವ ಸಾಕಷ್ಟು ಔಷಧೀಯ ಸಸ್ಯಗಳಿಂದ ಮಾಡುತ್ತಿರುವ ಚೂರ್ಣಗಳ ಕುರಿತು ರೈತರಿಗೆ ವಿವರವಾದ ಮಾಹಿತಿಗಳನ್ನು ನೀಡಿದರು.

ಪ್ರತಿ ರೈತ ತನ್ನ ಪ್ರತಿ ಹೆಜ್ಜೆಯಲ್ಲಿ ಮೌಲ್ಯವರ್ಧನೆಯ ಗುಂಗು ಹಿಡಿಸಿಕೊಂಡಾಗ ಮಾತ್ರ ರೈತ ಸುಭಿಕ್ಷವಾಗಿರಲು ಸಾಧ್ಯವೆಂದು ಪ್ರತಿಪಾದಿಸಿದರು. ತಮ್ಮ ತೋಟದ ಮೂಲೆ ಮೂಲೆಗೂ ರೈತರನ್ನು ಕರೆದೊಯ್ದು ಅವರು ಪ್ರತಿ ಗಿಡದಿಂದ ಬರುವ ಆದಾಯಗಳ ಲೆಕ್ಕಚಾರಗಳನ್ನು ರೈತರಿಗೆ ಮನವರಿಕೆ ಮಾಡಿಕೊಟ್ಟರು. ನಮ್ಮ ಪ್ರತಿ ಚಟುವಟಿಕೆಗಳಲ್ಲಿ ಸಂಗಾತಿ ಸೇರಿದಂತೆ ಮನೆಯವರೆಲ್ಲ ಕೈ ಜೋಡಿಸಿದರೆ ಮಾತ್ರ ಯಶಸ್ಸು ಸಾಧ್ಯ. ನಮ್ಮ ಉತ್ಪನ್ನಗಳಿಗೆ ಮಾರುಕಟ್ಟೆಯನ್ನು ನಾವೇ ಸೃಷ್ಟಿಸಿಕೊಳ್ಳಬೇಕು ಎಂದರು.

ನೇಸರ ಆರ್ಗ್ಯಾನಿಕ್ಸ್ ಬ್ರಾಂಡ್ ನಡಿ 150 ಕ್ಕೂ ಹೆಚ್ಚು ಮೌಲ್ಯವರ್ಧಿತ ಉತ್ಪನ್ನಗಳು ಸಾವಿರಾರು ಗ್ರಾಹಕರ ಮನೆ ಬಾಗಿಲಿನಲ್ಲಿ ಪ್ರವೇಶ ಮಾಡಿವೆ ಎಂದು ವಸಂತ್ ಮಾಲವಿ ಪತ್ನಿ ಚಂದ್ರ-ರೇಖಾ ಮಾಲವಿ ತಿಳಿಸಿದರು. ಉತ್ಪಾದನೆ ಮತ್ತು ಮಾರುಕಟ್ಟೆ ಎರಡರಲ್ಲೂ ನಾವು ಪ್ರಾಮಾಣಿಕವಾದ ಹೆಜ್ಜೆಗಳನ್ನಿಡಬೇಕಾಗುತ್ತದೆ ಎಂದು ಮಾರುಕಟ್ಟೆಯ ಗುಣ ಲಕ್ಷಣಗಳನ್ನು ತಿಳಿಸಿದರು.

ರೈತರ ಜೊತೆ ಬಂದಿದ್ದ ರಾಜ್ಯೋತ್ಸವ ಪ್ರಶಸ್ತಿ ವಿಜೇತ ವಿಶ್ವೇಶ್ವರ ಸಜ್ಜನ ಮಾತನಾಡಿ ಮಾರುಕಟ್ಟೆ ಬಗ್ಗೆ ಅಪಾರ ಜ್ಞಾನ ಹೊಂದಿರುವ ವಸಂತ್ ಮಾಲವಿ ಅವರ ಸಂಪರ್ಕದಲ್ಲಿರಿ ಎನ್ನುವ ಸಲಹೆಯನ್ನು ರೈತರಿಗೆ ನೀಡಿದರು. ಬೇಲದ ಹಣ್ಣಿನಿಂದ ಮತ್ತು ಇತರೆ ಕಾಡಿನ ಹಣ್ಣುಗಳಿಂದ ಮಾಡಬಹುದಾದ ಮೌಲ್ಯ ವರ್ಧನೆಗಳ ಕುರಿತು ಸೂಕ್ತ ಮಾಹಿತಿ ನೀಡಿದರು.

ತೋಟಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕ ಅಧಿಕಾರಿ ಸಮೀವುಲ್ಲಾ ಮಾತನಾಡಿ ಇತ್ತೀಚಿಗೆ ತಾಲ್ಲೂಕಿನಲ್ಲಿ ಪ್ರಸ್ತುತ ಹೊಸದಾಗಿ ಬಂದಿರುವ ಮಿಯಾವಕಿ ಅರಣ್ಯ ಯೋಜನೆ ಕುರಿತು ವಿವರಿಸಿದರಲ್ಲದೇ ಕರ್ಟಸಿ ಇಂಡಿಯಾ ಸಂಸ್ಥೆಯ ಸದಸ್ಯರು ಇದರ ಲಾಭವನ್ನು ಪಡೆದುಕೊಳ್ಳುವಂತೆ ಕಿವಿ ಮಾತುಗಳನ್ನಾಡಿದರು.

ಕರ್ಟಸಿ ಇಂಡಿಯಾದ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಪದ್ಮಕಲಾ ಮಾತನಾಡಿ ಮ್ಯಾನೋರ್ ಫಾರ್ಮ್ ಗೆ ಕಳೆದ ಒಂದು ವರ್ಷದಿಂದ ನಮ್ಮ ರೈತರನ್ನು ಕರೆತರಬೇಕೆನ್ನುವ ಉದ್ದೇಶ ಇಂದು ಈಡೇರಿದಂತಾಗಿದೆ. ನಿಜಕ್ಕೂ ನಮ್ಮ ರೈತರಿಗೆ ಮಾಲವಿ ದಂಪತಿಗಳು ಕೃಷಿಯಲ್ಲಿ ಆದಾಯ ಮಾಡಬಹುದಾದ ಸಾಕಷ್ಟು ಸಂಗತಿಗಳ ಬಗ್ಗೆ ವಿವರಿಸಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು

ಕೂಡ್ಲಿಗಿ ತಾಲ್ಲೂಕಿನ ಯೋಗ ಗುರುಗಳು ಮತ್ತು ಕೃಷಿಕರೂ ಆದ ಶಶಿಧರ ಗುರೂಜಿ ಮಾತನಾಡಿ ಇಂದು ಮ್ಯಾನೋರ್ ಫಾರ್ಮ್ ವೀಕ್ಷಿಸಿದ ನಂತರ ಇದೇ ಪದ್ಧತಿಯನ್ನು ತಾವೂ ಅನುಸರಿಸುವ ವಿಶ್ವಾಸ ವ್ಯಕ್ತಪಡಿಸಿದರು.

ಮ್ಯಾನೋರ್ ಫಾರ್ಮ್ ಕುರಿತು ಕೆಲ ರೈತರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

# ಗುರುಪೂರ್ಣಿಮೆ ಅಂಗವಾಗಿ ಗುರುನಮನ ಕಾರ್ಯಕ್ರಮ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿ ವಿತರಣೆ



ಸವಣೂರು, ಆಗಸ್ಟ್ 7: ಗುರುಪೂರ್ಣಿಮೆಯ ಪವಿತ್ರ ಅಂಗವಾಗಿ ಸವಣೂರು ನಗರದ ಪ್ರಸಿದ್ಧ ದೊಡ್ಡ ಹುಣಸೆ ಕಲ್ಮಠದಲ್ಲಿ ಇನ್ನರ್ ವೀಲ್ ಕ್ಲಬ್ ಆಫ್ ಸವಣೂರು ವತಿಯಿಂದ ಗುರುನಮನ ಕಾರ್ಯಕ್ರಮವನ್ನು ಅತ್ಯಂತ ಭಕ್ತಿಭಾವ, ಶ್ರದ್ಧೆ ಹಾಗೂ ಗೌರವದಿಂದ ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಮ.ನಿ.ಪ್ರ. ಚನ್ನಬಸವ ಸ್ವಾಮೀಜಿಯವರನ್ನು ಇನ್ನರ್ ವೀಲ್ ಕ್ಲಬ್ ಅಧ್ಯಕ್ಷೆ ಶ್ರೀಮತಿ ಸುಮಾ ನಿರಂಜನ ಹಾವಣಗಿ ಅವರ ನೇತೃತ್ವದಲ್ಲಿ, ಕ್ಲಬ್‌ನ ಎಲ್ಲ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಸದಸ್ಯೆಯರು ಆತ್ಮೀಯವಾಗಿ ಸನ್ಮಾನಿಸಿ, ಗುರುನಮನ ಅರ್ಪಿಸಿದರು.

ಸಮಾಜ ಸೇವೆಯ ತನ್ನ ಧ್ಯೇಯವನ್ನು ಮುಂದುವರಿಸುತ್ತಾ, ಇನ್ನರ್ ವೀಲ್ ಕ್ಲಬ್ ವತಿಯಿಂದ ಇಬ್ಬರು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್‌ಬುಕ್‌ಗಳು ಹಾಗೂ ಪೆನ್ನುಗಳನ್ನು ವಿತರಿಸಲಾಯಿತು. ಈ ನೆರವಿನಿಂದ ಮಕ್ಕಳ ಶೈಕ್ಷಣಿಕ ಪಯಣ ಮತ್ತಷ್ಟು ಸುಗಮವಾಗಲಿ ಎಂದು ಶುಭ ಹಾರೈಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅಧ್ಯಕ್ಷೆ ಶ್ರೀಮತಿ ಸುಮಾ ನಿರಂಜನ ಹಾವಣಗಿ, "ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸೇವೆ ತಲುಪಬೇಕು ಎಂಬುದು ಇನ್ನರ್ ವೀಲ್ ಕ್ಲಬ್‌ನ ಧ್ಯೇಯವಾಗಿದೆ. ಶಿಕ್ಷಣದ ಮೂಲಕ ಮಕ್ಕಳ ಭವಿಷ್ಯ ಉಜ್ವಲವಾಗಲಿ ಎಂಬ ಆಶಯದಿಂದ ಈ ಸಣ್ಣ ಪ್ರಯತ್ನ ಮಾಡಲಾಗಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದು ಉತ್ತಮ ನಾಗರಿಕರಾಗಿ ಬೆಳೆಯಲಿ" ಎಂದು ಆಶಿಸಿದರು.

ಆಶೀರ್ವಚನ ನೀಡಿದ ಪೂಜ್ಯ ಶ್ರೀ ಮ.ನಿ.ಪ್ರ. ಚೆನ್ನಬಸವ ಸ್ವಾಮೀಜಿಯವರು, "ಇನ್ನರ್ ವೀಲ್ ಕ್ಲಬ್ ಆಫ್ ಸವಣೂರು ಸಮಾಜಮುಖಿ ಸೇವಾ ಕಾರ್ಯಗಳ ಮೂಲಕ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ತನ್ನದೇ ಆದ ಗುರುತನ್ನು ಮೂಡಿಸಿರುವುದು ಶ್ಲಾಘನೀಯ. ಶಿಕ್ಷಣ, ಸೇವೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಇಂತಹ ಕಾರ್ಯಕ್ರಮಗಳು ಸಮಾಜಕ್ಕೆ ಆದರ್ಶವಾಗಿವೆ. ಇಂತಹ ಎಲ್ಲಾ ಸೇವಾ ಕಾರ್ಯಗಳಿಗೆ ನಮ್ಮ ಮಠದಿಂದ ಸದಾ ಸಂಪೂರ್ಣ ಸಹಕಾರ ಮತ್ತು ಪ್ರೋತ್ಸಾಹ ದೊರೆಯಲಿದೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ವೀಣಾ ವೀರನಗೌಡ, ಉಪಾಧ್ಯಕ್ಷೆ ಸರೋಜಾ ರಾಯಕರ್ ಖಖಿಔ ಪೂರ್ಣಿಮಾ ಬೆಣ್ಣಿ ಶೋಭಾ ಹಾವಣಗಿ, ಸವಿತಾ ಬೆಣ್ಣಿ, ಕುಸುಮಾ ತೆಗ್ಗಿಹಳ್ಳಿ, ಗೌರಮ್ಮ ಕಲ್ಮಠ, ಪ್ರೇಮಾ ಹುಲ್ಲತ್ತಿ ಮುಂತಾದವರು ಉಪಸ್ಥಿತರಿದ್ದರು

ಮಕ್ಕಳು ಪಾಲಕರು.. ಹಾಗೂ ಮಠದ ಕೆಲವು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು ಕಾರ್ಯಕ್ರಮ ಯಶಸ್ವಿಯಾಯಿತು

ಒಂದನೇ ಪುಟದಿಂದ..

## ಆಗಸ್ಟ್ 20ರಿಂದ ಆಸ್ತಿ ವಿವರ ಆನ್‌ಲೈನ್‌ನಲ್ಲಿ ಸಲ್ಲಿಕೆ ಕಡ್ಡಾಯ..!

ವ್ಯವಸ್ಥೆ ಜಾರಿಯಾಗಿರುವುದರಿಂದ ಕಡಿಮೆ ಸಮಯದಲ್ಲಿ ವಿವರಗಳನ್ನು ಸಲ್ಲಿಸಲು ಸಾಧ್ಯವಾಗಲಿದೆ.

ಅಧಿಕಾರಿಗಳು ಅಥವಾ ನೌಕರರು ಸಲ್ಲಿಸುವ ಕಾರ್ಯಕ್ಷಮತೆ ವರದಿ ಹಾಗೂ ಆಸ್ತಿ-ಹೊಣೆಗಾರಿಕೆಗಳ ವಿವರಗಳನ್ನು e-PAR ವ್ಯವಸ್ಥೆ ಸ್ವೀಕರಿಸಲಿದ್ದು, ಬಳಿಕ ಸಂಬಂಧಿತ ಇಲಾಖೆ ಅವುಗಳನ್ನು ಪರಿಶೀಲಿಸಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಪ್ರಕಾರ, ಆಸ್ತಿ ಮತ್ತು ಹೊಣೆಗಾರಿಕೆಗಳ ಘೋಷಣೆಯನ್ನು ಸಂಪೂರ್ಣವಾಗಿ ಡಿಜಿಟಲ್‌ಗೊಳಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಈ ವ್ಯವಸ್ಥೆಯನ್ನು ಈಗಾಗಲೇ ಐಎಎಸ್, ಐಪಿಎಸ್ ಮತ್ತು ಐಎಫ್‌ಎಸ್ ಅಧಿಕಾರಿಗಳು ಬಳಸುತ್ತಿರುವ ಮಾದರಿಯಲ್ಲಿಯೇ ರಾಷ್ಟ್ರೀಯ ಮಾಹಿತಿ ವಿಜ್ಞಾನ ಕೇಂದ್ರ ಅಭಿವೃದ್ಧಿಪಡಿಸಿದೆ.

ಸರ್ಕಾರದ 1994ರ ಸುತ್ತೋಲೆಯಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿಯೇ ಆಸ್ತಿ ವಿವರಗಳನ್ನು ಸಲ್ಲಿಸಬೇಕಾಗುತ್ತದೆ. ಆದರೆ, ಸಲ್ಲಿಕೆ ಮಾತ್ರ ಆನ್‌ಲೈನ್ ಮೂಲಕ ನಡೆಯಲಿದೆ.

ಎಲ್ಲ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರು 2025-26ನೇ ಸಾಲಿನ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರವನ್ನು ಆಗಸ್ಟ್ 20ರಿಂದ ಮೂಲಕ ಸಲ್ಲಿಸಬೇಕು. ಇನ್ನು ಮುಂಜೆ ಪ್ರತಿ ವರ್ಷ ಮಾರ್ಚ್ ಅಂತ್ಯದೊಳಗೆ ಇದೇ ವ್ಯವಸ್ಥೆಯ ಮೂಲಕ ವಾರ್ಷಿಕ ಆಸ್ತಿ ವಿವರಗಳನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

## ಮೋದಿ ವಿದೇಶ ಪ್ರವಾಸಗಳಿಗೆ 2025ರಲ್ಲಿ 180 ಕೋಟಿ ವೆಚ್ಚ

ಲಿಖಿತ ಉತ್ತರದಲ್ಲಿ ಸರ್ಕಾರವು ದತ್ತಾಂಶವನ್ನು ಹಂಚಿಕೊಂಡಿತ್ತು, ಅದರಂತೆ 2021 ರಿಂದ 2024 ರವರೆಗೆ ಪ್ರಧಾನಿಯವರ ವಿದೇಶಿ ಪ್ರವಾಸಗಳ ಒಟ್ಟು ವೆಚ್ಚವು ಸುಮಾರು 295 ಕೋಟಿ ರೂ.ನಷ್ಟಿತ್ತು.

ಈ ಪ್ರವಾಸಗಳ ಸಮಯದಲ್ಲಿ ಸಹಿ ಮಾಡಲಾದ ದ್ವಿಪಕ್ಷೀಯ ಒಪ್ಪಂದಗಳು ಮತ್ತು ತಿಳುವಳಿಕಾಪತ್ರಗಳ ದೇಶಾವಾರು ವಿವರಗಳು, ಘೋಷಿಸಲಾದ ಹೂಡಿಕೆ ಬದ್ಧತೆಗಳು ಮತ್ತು ಇದರ ಪರಿಣಾಮವಾಗಿ ಭಾರತದಲ್ಲಿ ಸ್ವೀಕರಿಸಲಾದ ನೈಜ ಪ್ರತ್ಯಕ್ಷ ವಿದೇಶಿ ಹೂಡಿಕೆಯ ಕುರಿತು ವಿದೇಶಾಂಗ ವ್ಯವಹಾರಗಳ ಸಚಿವಾಲಯವನ್ನು ಕೇಳಲಾಗಿತ್ತು.

ಏಪ್ರಿಲ್ 2021 ರಿಂದ ಡಿಸೆಂಬರ್ 2025 ರ ಅವಧಿಯಲ್ಲಿ ಸ್ವೀಕರಿಸಲಾದ ಒಟ್ಟು 381.8 ಬಿಲಿಯನ್ ಅಮೆರಿಕನ್ ಡಾಲರ್ ವಿದೇಶಿ ನೇರ ಹೂಡಿಕೆ ಸ್ವೀಕರಿಸಲಾಗಿದೆ.

ಹಂಚಿಕೊಳ್ಳಲಾದ ಪಟ್ಟಿಯ ಪ್ರಕಾರ, ಜುಲೈ 2021 ರಿಂದ ಪ್ರಧಾನಿಯವರ ವಿದೇಶಿ ಪ್ರವಾಸಗಳ ಸಮಯದಲ್ಲಿ 316 ತಿಳುವಳಿಕಾಪತ್ರಗಳಿಗೆ ಸಹಿ ಹಾಕಲಾಗಿದೆ.

ರಾಜ್ಯಸಭೆಗೆ ಸಲ್ಲಿಸಿದ ಉತ್ತರದಲ್ಲಿ ಯುಪಿಎ ಆಡಳಿತಾವಧಿಯಲ್ಲಿ ದಿವಂಗತ ಡಾ. ಮನ್‌ಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದಾಗ ಕೈಗೊಂಡ ಕೆಲವು ಪ್ರಮುಖ ವಿದೇಶಿ ಪ್ರವಾಸಗಳ ವೆಚ್ಚವನ್ನೂ ಸಚಿವಾಲಯ ಹೋಲಿಕೆಗಾಗಿ ಉಲ್ಲೇಖಿಸಿದೆ. ಈ ಹಿಂದಿನ ಒಂದೊಂದು ಪ್ರವಾಸದ ವೆಚ್ಚವು ಪ್ರಸಕ್ತ ವರ್ಷದಲ್ಲಿ ಪ್ರಧಾನಿ ಮೋದಿ ಅವರ ಸಂಪೂರ್ಣ ವಿದೇಶಿ ಪ್ರವಾಸಗಳಿಗೆ ತಗುಲಿದ ಒಟ್ಟು ವೆಚ್ಚಕ್ಕಿಂತ ಹೆಚ್ಚಾಗಿತ್ತು .

## ಸಚಿವ ಸಂಪುಟ ವಿಸ್ತರಣೆ ಬೆನ್ನಲ್ಲೇ ಡಿಕೆಶಿ ಸರ್ಕಾರಕ್ಕೆ ಭಾರಿ ಮುಜುಗರ..!

ಅದರಲ್ಲೂ ಬಿ. ನಾಗೇಂದ್ರ ಅವರ ಮರುನೇಮಕದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವುದು ತಿಳಿದುಬಂದಿದೆ.

ಸಂಪುಟ ವಿಸ್ತರಣೆಯಲ್ಲಿ ಶೇ. 80 ರಷ್ಟು ಸಚಿವ ಸ್ಥಾನಗಳನ್ನು ಅರ್ಹತೆ ನೋಡಿ ನೀಡಿಲ್ಲ, ಬದಲಿಗೆ "ಪೇಮೆಂಟ್ ಸೀಟುಗಳಂತೆ" ಹರಾಜು ಹಾಕಿ ಹಂಚಿಕೆ ಮಾಡಲಾಗಿದೆ ಎಂದು ಧ್ವನಿಯಲ್ಲಿ ಗಂಭೀರ ಆರೋಪ ಮಾಡಲಾಗಿದೆ.

ಪ್ರಕರಣಗಳನ್ನು ಎದುರಿಸುತ್ತಿರುವವರಿಗೆ ಸಚಿವ ಸ್ಥಾನ ನೀಡಲಾಗಿದೆ, ಆದರೆ "ಸಮರ್ಥ" ನಾಯಕರನ್ನು ಕಡೆಗಣಿಸಲಾಗಿದೆ ಎಂಬ ಮಾತುಗಳೂ ಕೇಳಿಬಂದಿವೆ ಎನ್ನಲಾಗಿದೆ. ಅಲ್ಲದೆ, ಕಾಂಗ್ರೆಸ್ ಹೈಕಮಾಂಡ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರ ಕುರಿತೂ ಟೀಕಾತ್ಮಕ ಮಾತುಗಳು ಆಡಿಯೊದಲ್ಲಿ ಇರುವುದಾಗಿ ವರದಿಯಾಗಿದೆ.

ಬಾಗಲಕೋಟೆ ಜಿಲ್ಲಾ ಉಸ್ತುವಾರಿ ನೇಮಕದ ವಿಚಾರವೂ ಆಡಿಯೊದಲ್ಲಿ ಪ್ರಸ್ತಾಪವಾಗಿದ್ದು, ಸಚಿವ ವಿಜಯಾನಂದ ಕಾಶಪ್ಪನವರ್ ಅವರನ್ನು ಜಿಲ್ಲಾ ಉಸ್ತುವಾರಿಯಾಗಿ ನೇಮಕ ಮಾಡದಂತೆ ತಂತ್ರ ರೂಪಿಸುವ ಕುರಿತು ಚರ್ಚಿಸಿರುವುದಾಗಿ ಹೇಳಲಾಗುತ್ತಿದೆ.

ಈ ಪ್ರಸ್ತಾಪವನ್ನು ತಡೆಯಲು ಕೆಲ ನಾಯಕರೊಂದಿಗೆ ಮಾತನಾಡುವುದಾಗಿ ಒಬ್ಬರು ಮತ್ತೊಬ್ಬರಿಗೆ ಭರವಸೆ ನೀಡಿರುವ ಧ್ವನಿಯೂ ಕೇಳಿಬಂದಿದೆ ಎನ್ನಲಾಗಿದೆ.

ಈ ಆಡಿಯೊ ವೈರಲ್ ಆದ ಬಳಿಕ ರಾಜಕೀಯ ವಲಯದಲ್ಲಿ ವ್ಯಾಪಕ ಚರ್ಚೆ ಆರಂಭವಾಗಿದೆ. ಆದರೆ, ಈ ಆಡಿಯೋ ಸತ್ಯಾಸತ್ಯತೆಯನ್ನು ಇದುವರೆಗೆ ಯಾವುದೇ ಅಧಿಕೃತ ಮೂಲ ದೃಢೀಕರಿಸಿಲ್ಲ.

## ಕಾಂಗ್ರೆಸ್‌ನಿಂದ ಸಾಂವಿಧಾನಿಕ ಹುದ್ದೆ ಹೈಜಾಕ್

### ಆ.14ಕ್ಕೆ ಸಭಾಪತಿ ಸ್ಥಾನಕ್ಕೆ ರಾಜೀನಾಮೆ: ಬಸವರಾಜ ಹೊರಟ್ಟಿ

ಖಾದರ್ ಹಾಗೂ ಎನ್.ಎ. ಹ್ಯಾರಿಸ್ ಅವರು ಮುಖ್ಯಮಂತ್ರಿಗಳ ಮೇಲೆ ತೀವ್ರ ಒತ್ತಡ ಹೇರಿದ್ದರು. ಆದರೆ ಸಚಿವರ ಮನವಿಯ ಹೊರತಾಗಿಯೂ ಡಿಕೆ ಶಿವಕುಮಾರ್ ತಮ್ಮ ನಿರ್ಧಾರವನ್ನು ಬದಲಿಸಿರಲಿಲ್ಲ.

“ಇದು ಕಾಂಗ್ರೆಸ್ ಹೈಕಮಾಂಡ್ ತೆಗೆದುಕೊಂಡಿರುವ ಅಂತಿಮ ತೀರ್ಮಾನ” ಎಂದು ಸ್ಪಷ್ಟಪಡಿಸಿದ ಸಿಎಂ ಸಭಾಪತಿ ಸ್ಥಾನ ತ್ಯಾಗ ಮಾಡುವಂತೆ ಹೊರಟ್ಟಿ ಅವರಲ್ಲಿ ವಿನಂತಿಸಿಕೊಂಡಿದ್ದರು. ಈ ವಿನಂತಿಗೆ ಸ್ಪಂದಿಸಿದ ಹೊರಟ್ಟಿ ರಾಜೀನಾಮೆಗೆ ಸಮ್ಮತಿಸಿದ್ದಾರೆ. ಸಾಂವಿಧಾನಿಕ ಹುದ್ದೆಗೆ ಈ ರೀತಿ ಅಗೌರವ ತರುವುದು ಹಾಗೂ ಹೈಜಾಕ್ ಮಾಡುವುದು ಸರಿಯಲ್ಲ. ಹೈಕಮಾಂಡ್ ಆದೇಶವಿದೆ, ಹೀಗಾಗಿ ರಾಜೀನಾಮೆ ಕೊಡಿ ಎಂದು ಸಿಎಂ ಹೇಳಿದರು. ಸಿದ್ದರಾಮಯ್ಯನವರು ಕೂಡ ನಾನು ಯಾರ ಬಳಿಯೂ ಮಾತನಾಡುವುದಿಲ್ಲ ಎಂದು ಹೇಳಿದ್ದರು. ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರವೂ ನಾನು ಸದನದಲ್ಲಿ ಸಾಮಾನ್ಯ ಸದಸ್ಯನಾಗಿ ಭಾಗವಹಿಸುತ್ತೇನೆ ಎಂದು ತಿಳಿಸಿದರು. ನನ್ನ ಮೇಲೆ ಈ ರೀತಿ ಅವಿಶ್ವಾಸ ವ್ಯಕ್ತಪಡಿಸುವ ಮಾತುಗಳನ್ನಾಡಿರುವುದು ನನ್ನ ಮನಸ್ಸಿಗೆ ತೀವ್ರ ಘಾಸಿ ಉಂಟುಮಾಡಿದೆ. ಇಂತಹ ವಾತಾವರಣದಲ್ಲಿ ಮುಂದುವರಿಯಲು ನನಗೆ ಇಷ್ಟವಿಲ್ಲ, ಆದ್ದರಿಂದಲೇ ರಾಜೀನಾಮೆ ನೀಡುತ್ತಿದ್ದೇನೆ ಎಂದರು.


# ನಾನು ಡಿಕೆಶಿ ಮನೆಮಗ, ನಾನೇ ಸಿಎಂ ಇದ್ದಂತೆ: ಶಾಸಕ ಶಿವಗಂಗಾ ಬಸವರಾಜ್

ದಾವಣಗೆರೆ: ನಾನು ಡಿ.ಕೆ ಶಿವಕುಮಾರ್ ಅವರ ಮನೆಮಗ, ಶಿವನ ಮುಂದೆ ಇರುವ ಬಸವ ನಾನು. ನಾನೇ ಮುಖ್ಯಮಂತ್ರಿ ಇದ್ದಂತೆ, ಮನೆ ಮಗನಿಗೆ ಯಾವಾಗಲೂ ಅವರ ಆಶೀರ್ವಾದ ಇದ್ದೇ ಇರುತ್ತದೆ ಎಂದು ಶಾಸಕ ಶಿವಗಂಗಾ ಬಸವರಾಜ್ ಹೇಳಿದರು.

ದಾವಣಗೆರೆಯಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಈ ವೇಳೆ, ಪಕ್ಷದಲ್ಲಿ ಐದಾರು ಬಾರಿ ಗೆದ್ದ ಹಿರಿಯ ಶಾಸಕರು ಇದ್ದಾರೆ. ನನಗೆ ಮಂತ್ರಿ ಸ್ಥಾನ ಸಿಗುವ ನಿರೀಕ್ಷೆ ಇತ್ತು. ಆದರೆ ಸಿಕ್ಕಿಲ್ಲ, ಮುಂದೆ ಸಾಕಷ್ಟ ಅವಕಾಶಗಳಿವೆ ಕಾದು ನೋಡೋಣ. ಅದರ ಬಗ್ಗೆ ಬಿಟ್ಟು ಅಭಿವೃದ್ಧಿ ಬಗ್ಗೆ ಮಾತನಾಡಬೇಕಿದೆ ಎಂದರು.

ಭ್ರಷ್ಟಾಚಾರ ಅರೋಪ ಇದ್ದರೂ ನಾಗೇಂದ್ರಗೆ ಸಚಿವ ಸ್ಥಾನ ನೀಡಿ-ದ್ದಾರೆ ಎಂಬ ವಿಪಕ್ಷ ಗಳ ಅರೋಪಕ್ಕೆ, ಭ್ರಷ್ಟಾಚಾರ ಆರೋಪ ಯಾರ ಮೇಲೆ ಇಲ್ಲ ಹೇಳಿ? ಬಿಜೆಪಿಯವರಿಗೆ ಇದರ ಬಗ್ಗೆ ಮಾತನಾಡೋ ನೈತಿಕತೆ ಇಲ್ಲ. ಇದೀಗ ಆರೋಪಿಗಳು ಅಷ್ಟೇ, ಅಪರಾಧ ಸಾಬೀತಾದ್ರೆ ಆಗ ಮಾತಾಡಲಿ. ಕಾನೂನು ಪ್ರಕಾರ ಎನಿದೆ ಅದೇ ರೀತಿ ಅರೆಸ್ಟ್ ಮಾಡಿದ್ದರು. ಈಗ ಹೊರಗೆ ಬಂದಿದ್ದಾರೆ. ನಾಗೇಂದ್ರ ಅವರಿಗೆ ಸಚಿವ ಸ್ಥಾನ ಕೊಟ್ಟಿದ್ದು ಸರಿ ಇದೆ ಎಂದು ಸಮರ್ಥಿಸಿಕೊಂಡರು.

ಸಚಿವ ಸಂಪುಟದಲ್ಲಿ ಡಿಕೆಶಿ ಆಪ್ತರು, ಸಿದ್ದರಾಮಯ್ಯ ಆಪ್ತರು ಎಂದು ಬರೋದಿಲ್ಲ. ಪ್ರಾಂತ್ಯವಾರು ಸಚಿವ ಸ್ಥಾನ ನೀಡಿದ್ದಾರೆ. ನಮ್ಮ ಕೆ.ಎಸ್ ಬಸವಂತಪ್ಪ ಅವರಿಗೆ ಕೊಟ್ಟಿದ್ದಾರೆ. ಈ ವಿಚಾರದಲ್ಲಿ ನಮಗೆ ಸಂತೋಷವಿದೆ ಎಂದರು.



ನಾನು ರೈತರ ಕೋಟಾ ಅಡಿ ಮಂತ್ರಿ ಸ್ಥಾನ ಕೇಳಿದ್ದೆ, ಆದರೆ ಕೊಟ್ಟಿಲ್ಲ. ಮುಂದೆ ಸಾಕಷ್ಟು ಅವಕಾಶ ಇದೆ, ಇನ್ನೂ ಮೊದಲ ಬಾರಿ ಗೆದ್ದಿರುವೆ. ಸಿಎಂ ರಾಜಕೀಯ ಕಾರ್ಯದರ್ಶಿ ಕೊಟ್ಟರೂ ನಿಭಾಯಿಸುವೆ ಎಂದು ಸಿಎಂ ರಾಜಕೀಯ ಕಾರ್ಯದರ್ಶಿ ಸ್ಥಾನದ ಬಗ್ಗೆ ಆಕಾಂಕ್ಷೆ ವ್ಯಕ್ತಪಡಿಸಿದ್ದಾರೆ.

# Gen Z ದೇಶದ್ರೋಹಿಗಳಲ್ಲ : ಭಾಗವತ್

ಸಂವಾದ ನಡೆಯಬೇಕಾದರೆ ಪರಸ್ಪರ ಗೌರವ ಮತ್ತು ಅಪ್ಯಾಯತೆಯ ಭಾವನೆ ಅಗತ್ಯ. ನಾವಿಬ್ಬರೂ ಪರಸ್ಪರ ಗುರುತಿಸಿ ಗೌರವಿಸಿದಾಗ ಮಾತ್ರ ಅರ್ಥಪೂರ್ಣ ಸಂವಾದ ಸಾಧ್ಯ. ಆಗ ಮಾತ್ರ ಅವರ ಕಳವಳಗಳು ನಮಗೆ ಮತ್ತು ನಮ್ಮ ದೃಷ್ಟಿಕೋನ ಅವರಿಗೆ ಅರ್ಥವಾಗುತ್ತದೆ. ಪ್ರಜಾಪ್ರಭುತ್ವದಲ್ಲಿ ನಡೆಯಬೇಕಾದದ್ದು ಇದೇ ರೀತಿ ಎಂದರು.

ಇಂದಿನ ಯುವಪೀಳಿಗೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಈಗಿನ ಯುವಜನತೆ ಹಾಲಿ ಪೀಳಿಗೆಗಿಂತ ಹೆಚ್ಚು ಪ್ರಾಮಾಣಿಕವಾಗಿದೆ ಎಂದು ನಾನು ಭಾವಿಸುತ್ತೇನೆ. ಈ ಪೀಳಿಗೆ ದೇಶದ ಬಗ್ಗೆ ಪ್ರಾಮಾಣಿಕತೆ, ದೇಶಭಕ್ತಿಯ ಭಾವನೆ ಹಾಗೂ ಸೇವಾ ಮನೋಭಾವವನ್ನು ಹೊಂದಿರಬೇಕು ಎಂದು ಹೇಳಿದರು.

ಇತ್ತೀಚಿನ ವಿದ್ಯಾರ್ಥಿ ಪ್ರತಿಭಟನೆಗಳ ಕುರಿತು ಮಾತನಾಡಿದ ಆರ್‌ಎಸ್‌ಎಸ್ ಮುಖ್ಯಸ್ಥರು, ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆಯೂ ಸಹ ಸರ್ವಸಮ್ಮತಿಯನ್ನು ರೂಪಿಸುವ ಒಂದು ಮಾರ್ಗವಾಗಿದೆ. ಚರ್ಚೆ ಮತ್ತು ಸಂವಾದದ ಮೂಲಕ ಒಮ್ಮತ ಮೂಡುತ್ತದೆ. ಯಾವುದೇ ಕಾರಣಕ್ಕೆ ಸಮಸ್ಯೆಗಳಿಗೆ ಸ್ಪಂದನೆ ಸಿಗದಿದ್ದಾಗ ಆಕ್ರೋಶ ಪ್ರತಿಭಟನೆಯಾಗಿ ಹೊರಹೊಮ್ಮುತ್ತದೆ. ಆದರೆ ಈ ಪ್ರತಿಭಟನೆಗಳು ಒಮ್ಮತ ಮೂಡಿಸುವುದಕ್ಕಿರಬೇಕೇ ಹೊರತು ವಿಭಜನೆ ಸೃಷ್ಟಿಸುವುದಕ್ಕಲ್ಲ ಎಂದರು.

ದೇಶದ ಶಿಕ್ಷಣ ವ್ಯವಸ್ಥೆಯ ಕುರಿತು ಮಾತನಾಡಿದ ಅವರು,

# ಹಲವು ಕಡೆ ಬಂದ್; ಪ್ರತಿಭಟನೆ!

ಎಲ್ಲಾ ಅಂಗಡಿಗಳು, ಬಸ್ ಮತ್ತು ಆಟೋರಿಕ್ಷಾ ಇರಲಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಬಂಗಾರಪೇಟೆ ಬಂದ್‌ಗೆ ದಲಿತ ಸಂಘಟನೆಗಳು, ವರ್ತಕರ ಸಂಘ, ಆಟೋ ಚಾಲಕರ ಸಂಘ, ರೈತ ಸಂಘ ಸೇರಿದಂತೆ ಹಲವು ಪ್ರಗತಿಪರ ಸಂಘಟನೆಗಳು ಬೆಂಬಲ ಸೂಚಿಸಿದ್ದವು. ಬಲಗೈ ಸಮುದಾಯಕ್ಕೆ ಸೇರಿದ ಎಸ್.ಎನ್.ನಾರಾಯಣಸ್ವಾಮಿ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರೂ ಸಂಪುಟದಲ್ಲಿ ಅವಕಾಶ ನೀಡದೆ ಹೈಕಮಾಂಡ್ ಅನ್ಯಾಯ ಮಾಡಿದೆ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.ಹಾವೇರಿಯಲ್ಲೂ ಪ್ರತಿಭಟನೆ : ಇನ್ನು ಹಾವೇರಿ ಜಿಲ್ಲೆಯ, ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ್ ಅವರ ಬೆಂಬಲಿಗರು ಬ್ಯಾಡಗಿ-ಹಾವೇರಿ ಮಠದಿಂದ ಮೈಲಾರ ಮಹಾದೇವಪ್ಪ ವೃತ್ತದವರೆಗೆ ಮೆರವಣಿಗೆ ನಡೆಸಿ, ತಮ್ಮ ಶಾಸಕರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೇಕೆಂದು ಒತ್ತಾಯಿಸಿದರು. ಉತ್ತರ ಕರ್ನಾಟಕದ ಕುರುಬ ಸಮುದಾಯದ ಪ್ರಮುಖ ನಾಯಕರೊಬ್ಬರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ನೀಡಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ. ನಿನ್ನೆ ಬಾಗೇಪಲ್ಲಿ ಶಾಸಕ ಸುಬ್ಬಾರೆಡ್ಡಿ ಬೆಂಬಲಿಗರು ಮೂರು ತಾಲೂಕುಗಳನ್ನ ಬಂದ್ ಮಾಡಿ ಆಕ್ರೋಶ ಹೊರಹಾಕಿದ್ದರು.

# ಸಂಪ್ರದಾಯ ಉಳಿಸುವ ಹೊಣೆ ವಿಪ್ರ ಸಮುದಾಯದ ಮೇಲಿದೆ ಶ್ರೀ ವೀರೇಶಾನಂದ ಸರಸ್ವತೀ ಸ್ವಾಮೀಜಿ




ತುಮಕೂರು: ಭಾರತೀಯ ಸಂಸ್ಕೃತಿ, ಸನಾತನ ಧರ್ಮ ಹಾಗೂ ಕುಟುಂಬ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ವರ್ಗಾಯಿಸುವ ಜವಾಬ್ದಾರಿ ವಿಪ್ರ ಸಮುದಾಯದ ಮೇಲಿದೆ. ಹಿರಿಯರು ಆಚರಿಸಿಕೊಂಡು ಬಂದ ಸಂಪ್ರದಾಯಗಳನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಧರ್ಮ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕ ಜೀವನದ ಮೂಲಕ ಸಮಾಜವನ್ನು ಸದೃಢಗೊಳಿಸಬೇಕಾಗಿದೆ ಎಂದು ತುಮಕೂರಿನ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದ ಶ್ರೀ ವೀರೇಶಾನಂದ ಸರಸ್ವತೀ ಸ್ವಾಮೀಜಿ ಹೇಳಿದರು. ನಗರದ ಬಿ.ಎಚ್. ರಸ್ತೆಯ ಶೃಂಗೇರಿ ಶಂಕರ ಮಠದಲ್ಲಿ ತುಮಕೂರು ಜಿಲ್ಲಾ ಮುಲಕನಾಡು ವಿಪ್ರಸಂಘದ ದಶಮಾನೋತ್ಸವ ಅಂಗವಾಗಿ ಆಯೋಜಿಸಿದ್ದ ಸ್ಮರಣ ಸಂಚಿಕೆ ಬಿಡುಗಡೆ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಸಂಪ್ರದಾಯ ಎನ್ನುವುದು ಕೇವಲ ಆಚರಣೆಗಳ ಸಮೂಹವಲ್ಲ; ಅದು ನಮ್ಮ ಸಂಸ್ಕೃತಿ, ಜೀವನಮೌಲ್ಯಗಳು ಮತ್ತು ಧಾರ್ಮಿಕ ಪರಂಪರೆಯ ಜೀವನಾಡಿಯಾಗಿದೆ. ಈ ಪರಂಪರೆಯನ್ನು ಮುಂದಿನ ತಲೆಮಾರಿಗೆ ಪರಿಚಯಿಸಿ, ಅದನ್ನು ಉಳಿಸಿ ಬೆಳೆಸುವ ಕಾರ್ಯದಲ್ಲಿ ಪ್ರತಿಯೊಬ್ಬರೂ ಪಾಲುದಾರರಾಗಬೇಕು ಎಂದು ಹೇಳಿದರು.

# ನೂತನ ಉಸ್ತುವಾರಿ ಸಚಿವರಾದ ಪಿ.ಎಂ. ನರೇಂದ್ರ ಸ್ವಾಮಿಯವರಿಂದ ಕೊಡಗು ಜಿಲ್ಲಾ ಪ್ರವಾಸ

ಮಡಿಕೇರಿ :ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿ ಮತ್ತು ಬರ ಪರಿಸ್ಥಿತಿ ಕುರಿತು ನಡೆದ ಪರಿಶೀಲನಾ ಸಭೆಯಲ್ಲಿ ಮಾಹಿತಿ ಪಡೆದು ನೂತನ ಉಸ್ತುವಾರಿ ಸಚಿವರು ಮಾತನಾಡಿದರು.

ಹವಾಮಾನ ವೈಪರೀತ್ಯದಿಂದ ಈ ಬಾರಿ ಮುಂಗಾರು ಆರಂಭವಾಗುವುದು ತಡವಾಗಿದೆ. ಜಿಲ್ಲೆಯ ಅಲ್ಲಲ್ಲಿ ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗೆ ಹಿನ್ನಡೆಯಾಗಿದೆ. ಆದರೂ ಸಹ ಆಗಸ್ಟ್ ತಿಂಗಳಲ್ಲಿ ಉತ್ತಮ ಮಳೆಯಾಗುವ ಸಾಧ್ಯತೆ ಇದ್ದು ಭತ್ತ ನಾಟಿ ಕಾರ್ಯ ಹಾಗೂ ಇತರೆ ಕೃಷಿ ಚಟುವಟಿಕೆ ನಡೆಯಲಿದೆ ಎಂದು ಸಚಿವರು ಹೇಳಿದರು. ಜಿಲ್ಲೆಯಲ್ಲಿ ಮಳೆಯಿಂದಾಗಿ ಸ್ಥಳೀಯ ಸಂಸ್ಥೆ ಲೋಕೋಪಯೋಗಿ, ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯ ರಸ್ತೆಗಳು ಗುಂಡಿ ಬಿದ್ದಿದ್ದು ಇವುಗಳನ್ನು ಮುಚ್ಚಲು ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಮನವಿ ಮಾಡಲಾಗುವುದೆಂದು ಇದೇ ಸಂದರ್ಭ ಸಚಿವರು ತಿಳಿಸಿದರು. ರಸ್ತೆ ಸರಿಪಡಿಸುವ ಸಂಬಂಧ ಟೆಂಡರ್ ಆಹ್ವಾನಿಸಬೇಕು.

ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕರ್ತವ್ಯ ನಿರ್ವಹಿಸಬೇಕು. ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸುವಂತಾಗಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರಾದ ಡಾ.ಮಂತರ್ ಗೌಡ ಅವರು, ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಉತ್ತಮ ಮಳೆಯಾಗುತ್ತಿದ್ದು ಇದರಿಂದಾಗಿ ರಸ್ತೆ ಹಾಳಾಗಿದ್ದು ಗುಂಡಿಗಳನ್ನು ಮುಚ್ಚುವ ಕೆಲಸ ಆಗಬೇಕೆಂದು ಎಂಜಿನಿಯರ್‌ಗಳಿಗೆ ತಾಕೀತು ಮಾಡಿದರು.

ಒಳಚರಂಡಿ ಕಾಮಗಾರಿ ಅಪೂರ್ಣವಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದೆ. ಆದ್ದರಿಂದ ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸಚಿವರಲ್ಲಿ ಮನವಿ ಮಾಡಿದರು.





# ಮಹಿಳಾ ಮೀಸಲಾತಿ ತಕ್ಷಣ ಜಾರಿಗೆ ಆಗ್ರಹಿಸಿ ರಾಷ್ಟ್ರಪತಿಗೆ ಮನವಿ




ಯಾದಗಿರಿ: ಮಹಿಳಾ ಮೀಸಲಾತಿಯನ್ನು ಜನಗಣತಿ ಹಾಗೂ ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಯಿಂದ ಬೇರ್ಪಡಿಸಿ, ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದು ಭಾಗ ಮೀಸಲಾತಿಯನ್ನು ಯಾವುದೇ ವಿಳಂಬವಿಲ್ಲದೆ ಜಾರಿಗೆ ತರಬೇಕು ಎಂದು ಆಗ್ರಹಿಸಿ ರಾಷ್ಟ್ರೀಯ ಮಹಿಳಾ ಮೀಸಲಾತಿ ಒಕ್ಕೂಟ ವತಿಯಿಂದ ಬುಧವಾರ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿದ ಬಳಿಕ ಒಕ್ಕೂಟದ ಪದಾಧಿಕಾರಿಗಳು ಮಾತನಾಡಿ, 'ಮಹಿಳಾ ಮೀಸಲಾತಿ ಕಾಯ್ದೆ ಎಂದು ಕರೆಯಲಾಗುವ ಸಂವಿಧಾನದ 106ನೇ ತಿದ್ದುಪಡಿ ಕಾಯ್ದೆ–2023 ಮಹಿಳೆಯರ ರಾಜಕೀಯ ಪ್ರಾತಿನಿಧ್ಯವನ್ನು ಖಚಿತಪಡಿಸುವ ಐತಿಹಾಸಿಕ ಹೆಜ್ಜೆಯಾಗಿದ್ದರೂ, ಅದರ ಅನುಷ್ಠಾನವನ್ನು ಮುಂದಿನ ಜನಗಣತಿ ಹಾಗೂ ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಗೆ ಜೋಡಿಸಿರುವುದರಿಂದ ಮಹಿಳೆಯರ ಸಾಂವಿಧಾನಿಕ ಹಕ್ಕು ವಿಳಂಬವಾಗುತ್ತಿದೆ' ಎಂದು ಹೇಳಿದರು.

ಸುಮಾರು ಮೂರು ದಶಕಗಳಿಂದ ಮಹಿಳೆಯರು ರಾಜಕೀಯ ಮೀಸಲಾತಿಗಾಗಿ ಕಾಯುತ್ತಿದ್ದು, 1996ರಲ್ಲಿ ಮಂಡನೆಯಾದ ಮೂಲ ಮಹಿಳಾ ಮೀಸಲಾತಿ ಮಸೂದೆ ಹಾಗೂ 2010ರಲ್ಲಿ ರಾಜ್ಯಸಭೆ ಅಂಗೀಕರಿಸಿದ್ದ ಮಸೂದೆಯಲ್ಲಿ ಜನಗಣತಿ ಮತ್ತು ಕ್ಷೇತ್ರ ಮರುವಿಂಗಡಣೆ ಷರತ್ತುಗಳಿರಲಿಲ್ಲ.

ಬಳಿಕ ಸೇರಿಸಲಾದ ಈ ಷರತ್ತುಗಳನ್ನು ತೆಗೆದುಹಾಕಿ ಅಗತ್ಯ ಸಾಂವಿಧಾನಿಕ ತಿದ್ದುಪಡಿ ತರಬೇಕು. ಮುಂಬರುವ ಚುನಾವಣೆಗಳಿಂದಲೇ ಮಹಿಳಾ ಮೀಸಲಾತಿಯನ್ನು ಜಾರಿಗೆ ತರಬೇಕು' ಎಂದು ಅವರು ಒತ್ತಾಯಿಸಿದರು.

ಜನಗಣತಿ ಮತ್ತು ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಯಿಂದ ಮಹಿಳಾ ಮೀಸಲಾತಿಯನ್ನು ಬೇರ್ಪಡಿಸುವುದು, ಅದಕ್ಕೆ ಅಗತ್ಯವಾದ ಸಾಂವಿಧಾನಿಕ ತಿದ್ದುಪಡಿ ತರುವುದು ಹಾಗೂ ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದು ಭಾಗ ಮೀಸಲಾತಿಯನ್ನು ತಕ್ಷಣ ಜಾರಿಗೆ ತರುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕು' ಎಂದು ಆಗ್ರಹಿಸಿದರು.

# ಮೇಲ್ಕುಂಟೆ ಗೇಟ್ ಬಳಿ ಭೀಕರ ಅಪಘಾತ: ಓರ್ವ ಸಾವು, ಇಬ್ಬರಿಗೆ ಗಂಭೀರ ಗಾಯ

ಶಿರಾ ; ತಾಲೂಕಿನ ಮೇಲ್ಕುಂಟೆ ಗೇಟ್ ಸಮೀಪ ದ್ವಿಚಕ್ರ ವಾಹನ, ಹಾಗೂ ಕೆಎಸ್‌ಆರ್‌ಟಿಸಿ ಬಸ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಯುವಕನೊಬ್ಬ ಸ್ಥಳದಲ್ಲೇ ಮೃತಪಟ್ಟಿದ್ದು, ಮತ್ತಿಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಮೃತ ಯುವಕನನ್ನು ಶಿರಾ ನಗರದ ಕೋಟೆ ನಿವಾಸಿ ಇಮ್ರಾನ್ (23) ಎಂದು ಗುರುತಿಸಲಾಗಿದೆ.

ಅಪಘಾತದಲ್ಲಿ ನವಾಜ್, ಹಾಗೂ ಅಲ್ಲಾಬಕಾಶ್, ಎಂಬುವವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಸ್ಥಳೀಯರು ಹಾಗೂ ಪೊಲೀಸರು ಗಾಯಾಳುಗಳನ್ನು ತಕ್ಷಣ ಶಿರಾ ಆಸ್ಪತ್ರೆಗೆ ರವಾನಿಸಿದ್ದು, ಅಲ್ಲಿ ಪ್ರಥಮ ಚಿಕಿತ್ಸೆ ನೀಡಿದ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ತುಮಕೂರು ಜಿಲ್ಲಾ ಆಸ್ಪತ್ರೆಗೆ ಕಳುಹಿಸಲಾಗಿದೆ.

ಅಪಘಾತದಲ್ಲಿ ಭಾಗಿಯಾಗಿದ್ದ ಕೆಎಸ್‌ಆರ್‌ಟಿಸಿ ಬಸ್‌ನ ನೋಂದಣಿ ಸಂಖ್ಯೆ ಏಂ–06 ಈ–0823 ಎಂದು ತಿಳಿದುಬಂದಿದೆ.

ಘಟನೆ ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಮಾಹಿತಿ ತಿಳಿದ ತಕ್ಷಣ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದಾರೆ.

ಅಪಘಾತಕ್ಕೆ ನಿಖರ ಕಾರಣವೇನು ಹಾಗೂ ವಾಹನಗಳ ಸಂಚಾರದ ಸಂದರ್ಭದಲ್ಲಿ ಏನಾಯಿತು ಎಂಬುದರ ಕುರಿತು ಪಟ್ಟನಾಯಕನಹಳ್ಳಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.



ಪ್ರಿಯ ಓದುಗರೇ ಅನಂತ ಜನಶಕ್ತಿ ಕನ್ನಡ ದಿನಪತ್ರಿಕೆಯನ್ನು ತಪ್ಪದೇ ಓದಿರಿ ಹಾಗೂ ಪ್ರೋತ್ಸಾಹಿಸಿ

# ಡಾ. ಜಿ ಪರಮೇಶ್ವರ್ ಹುಟ್ಟುಹಬ್ಬದ ಅಂಗವಾಗಿ ರಕ್ತದಾನ ಮತ್ತು ಕಣ್ಣಿನ ತಪಾಸಣ ಶಿಬಿರ



ಕುಣಿಗಲ್ : ಕುಣಿಗಲ್ ನಲ್ಲಿ ಡಾ. ಜಿ ಪರಮೇಶ್ವರ್ ಯುವ ಸೈನ್ಯ ವತಿಯಿಂದ ನೆಡೆಯುತ್ತಿರುವ ಸಭೆಯಲ್ಲಿ ದೀಪ ಹಚ್ಚುವುದರ ಮೂಲಕ ಉದ್ಘಾಟನೆ ಮಾಡಿದ ಮಾಜಿ ಪುರಸಬಾ ಅಧ್ಯಕ್ಷರು ಮಾತನಾಡಿ ಡಾ. ಜಿ ಪರಮೇಶ್ವರ್ ರವರು ರಾಜ್ಯದ ಉಪಮುಖ್ಯಮಂತ್ರಿಯಾಗಿ ತುಂಬಾ ಒಳ್ಳೇಯ ಕೆಲಸ ಮಾಡಿದ್ದಾರೆ ದೀನ ದಲಿತರ ಪರವಾಗಿ ಇರುವ ಡಾ. ಜಿ ಪರಮೇಶ್ವರ್ ಕೆಲಸ ಮಾಡ್ತಾಯಿದ್ದಾರೆ ಅವರಿಗೆ ಇನ್ನೂ ಉನ್ನತ ಸ್ಥಾನ ಸಿಗಲಿ ಮುಂದಿನ ಮುಖ್ಯಮಂತ್ರಿ ಆಗಲಿ ಎಂದರು.

ಡಾ. ಜಿ ಪರಮೇಶ್ವರ್ ಯುವ ಸೈನ್ಯ ಅಧ್ಯಕ್ಷ ಮಾತನಾಡಿ ತುಂಬಾ ವರ್ಷಗಳಿಂದ ನನ್ನ ದೇವರು ಎಂದು ಕೊಂಡಿರುವ ಡಾ ಜಿ ಪರಮೇಶ್ವರ್ ರವರ ಜನ್ಮ ದಿನಾಚರಣೆಯ ನ್ನು ಬಡ ಬಗ್ಗರಿಗೆ ಸಹಾಯ ಮಾಡುವುದರ ಮೂಲಕ ಜನ್ಮ ದಿನಾಚರಣೆಯ ನ್ನು ಮಾಡಿಕೊಂಡು ಬಂದಿದ್ದು ಈ ವರ್ಷವೂ ಕೂಡ ಜನ್ಮ ದಿನಾಚರಣೆಯ ಅಂಗವಾಗಿ ಅಂದ ಮಕ್ಕಳಿಗೆ ಸೋಲಾರ್ ವಾಟರ್ ಹೀಟರ್ ಮತ್ತು ಉಚಿತ ಕಣ್ಣಿನ ತಪಾಸಣ ಶಿಬಿರ ಮತ್ತು ರಕ್ತ ದಾನ ಶಿಬಿರ ಮತ್ತು ಊಟದ ವ್ಯವಸ್ಥೆ ಕೂಡ ಮಾಡಿ ವಿಜೃಂಬಣೆಯಿಂದ ಆಚರಣೆ ಮಾಡಿದರು ತುಮಕೂರು ಜಿಲ್ಲಾ ಅಧ್ಯಕ್ಷರು ಬಾಬ ಪಕೃದಿನ್ ಈ ಸಂಧರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಯಾದ ರಘು ರಾಜ್ಯ ಸಂಘಟನಾ ಕಾರ್ಯದರ್ಶಿ ಮೋಹನ್ ಗೋವಿಂದರಾಜು ಚಕ್ರವರ್ತಿ ರಂಗಸ್ವಾಮಿ ಮಾರುತಿ ಕಿಶೋರ್ ಬಿ.ಟಿ ಕಾಂಗ್ರೆಸ್ ಮುಖಂಡರು ಹಪ್ರಿನ್ ತಾಜ್ ಪ್ರಾಂಶುಪಾಲರು ಜನಾರ್ಧನ್ ರೈತ ಸಂಘ ಜಿಲ್ಲಾಧ್ಯಕ್ಷರು ಮುನಿಯಪ್ಪ ಇನ್ನೂ ಮುಂತಾದವರು ಇದ್ದರು.

# ಮತ್ತೆ ವಿಧಾನಸಭೆಗೆ ಜೆಸಿಎಂ ಬರಬೇಕು : ಕೆ.ಬಿ. ಸುರೇಶ್



ಚಿಕ್ಕನಾಯಕನಹಳ್ಳಿ: ಮಾಜಿ ಸಚಿವ ಹಾಗೂ ಜೆಸಿ ಮಾಧುಸ್ವಾಮಿ ಅವರ ಹುಟ್ಟುಹಬ್ಬವನ್ನು ಜೆ.ಸಿ.ಪುರದಲ್ಲಿರುವ ಅವರ ನಿವಾಸದಲ್ಲಿ ಸರಳವಾಗಿ ಹಾಗೂ ಅಭಿಮಾನಿಗಳ ಸಂಭ್ರಮದೊಂದಿಗೆ ಆಚರಿಸಲಾಯಿತು. ಜೆ.ಸಿ.ಪುರ ಗ್ರಾಮದಲ್ಲಿರುವ ಜೆ.ಸಿ. ಮಾಧುಸ್ವಾಮಿ ಅವರ ನಿವಾಸಕ್ಕೆ ದೊಡ್ಡಗುಣಿ ಮಠದ ಶ್ರೀ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮೀಜಿ, ತುರುವೇಕೆರೆ ಕ್ಷೇತ್ರದ ಶಾಸಕ ಎಂ.ಟಿ. ಕೃಷ್ಣಪ್ಪ ಅವರು ತಮ್ಮ ಪುತ್ರ ಹಾಗೂ ಕಾರ್ಯಕರ್ತರೊಂದಿಗೆ ಭೇಟಿ ನೀಡಿ ಮಾಧುಸ್ವಾಮಿ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿದರು.

ಇದೇ ಸಂದರ್ಭದಲ್ಲಿ ಮೈಸೂರಿನ ಪ್ರತಿಷ್ಠಿತ ಲಾ ಫಾರ್ ಆಲ್ ಕಾನೂನು ಮಾಸ ಪತ್ರಿಕೆ–ಯ ಪ್ರಧಾನ ಸಂಪಾದಕ ಹಾಗೂ ಮೈಸೂರಿನ ವಕೀಲರ ಸಂಘ ಮತ್ತು ಮೈಸೂರು ಜಿಲ್ಲಾ ಸರ್ಕಾರಿ ವಕೀಲರ ಸಂಘದ ಮಾಜಿ ಕಾರ್ಯದರ್ಶಿ ಕೆ.ಬಿ. ಸುರೇಶ್ ಅವರು ತಮ್ಮ ಸಹೋದ್ಯೋಗಿಗಳಾದ ಹಿರಿಯ ವಕೀಲರಾದ ಮಾದೇವ್ ಪ್ರಸಾದ್, ಶಾವಲಿಂಗಪ್ಪ, ಸುದರ್ಶನ್, ಕುಳ್ಳಪ್ಪ ಹಾಗೂ ಸ್ನೇಹಿತರಾದ ಪ್ರತಾಪ್ ಅವರೊಂದಿಗೆ ಜೆ.ಸಿ. ಮಾಧುಸ್ವಾಮಿ ಅವರನ್ನು ಭೇಟಿ ಮಾಡಿದರು.

ಹುಟ್ಟುಹಬ್ಬದ ಶುಭಾಶಯ ಕೋರಿದ ಬಳಿಕ ಸಿಹಿ ನೀಡಿ ಅವರ ಆಶೀರ್ವಾದ ಪಡೆದರು. ನಂತರ ಕೆ.ಬಿ. ಸುರೇಶ್ ಹಾಗೂ ಅವರ ತಂಡ ದೊಡ್ಡಬಿದರೆ ಸಮೀಪದಲ್ಲಿರುವ ಜೆಸಿಎಂ ಇಂಟರ್‌ನ್ಯಾಷನಲ್ ಶಿಕ್ಷಣ ಸಂಸ್ಥೆಗೆ ಭೇಟಿ ನೀಡಿ ಶಾಲಾ ಹಾಗೂ ಕಾಲೇಜಿನ ವಿದ್ಯಾರ್ಥಿಗಳಿಗೆ ಸಿಹಿ ಹಂಚುವ ಮೂಲಕ ಜೆ.ಸಿ. ಮಾಧುಸ್ವಾಮಿ ಅವರ ಹುಟ್ಟುಹಬ್ಬವನ್ನು ಆಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆ.ಬಿ. ಸುರೇಶ್ ಅವರು, "ಜೆ.ಸಿ. ಮಾಧುಸ್ವಾಮಿ ಅವರು ರಾಜ್ಯದ ಅತ್ಯಂತ ಘನತೆ ಹಾಗೂ ದಕ್ಷ ರಾಜಕಾರಣಿಗಳಲ್ಲಿ ಒಬ್ಬರು.

ಸಂಸದೀಯ ವಿಚಾರಗಳ ಬಗ್ಗೆ ಆಳವಾದ ಜ್ಞಾನ ಹೊಂದಿರುವ ಅವರು ವಿಧಾನಸಭೆಯಲ್ಲಿ ಉತ್ತಮ ಸಂಸದೀಯ ಪಟುವಾಗಿ ಗುರುತಿಸಿಕೊಂಡಿದ್ದಾರೆ.

ಅಂತಹ ವ್ಯಕ್ತಿ ಪ್ರಸ್ತುತ ವಿಧಾನಸಭೆಯಲ್ಲಿ ಇಲ್ಲದಿರುವುದು ನಮಗೆ ದುರಂತದ ಸಂಗತಿ. ಮುಂಬರುವ ಚುನಾವಣೆಯಲ್ಲಿ ಜೆ.ಸಿ. ಮಾಧುಸ್ವಾಮಿ ಅವರು ಗೆದ್ದು ಮತ್ತೆ ವಿಧಾನಸಭೆಗೆ ಪ್ರವೇಶಿಸಬೇಕು ಎಂಬುದು ನಮ್ಮೆಲ್ಲರ ಆಶಯ" ಎಂದು ಹೇಳಿದರು.

ಜೆ.ಸಿ. ಮಾಧುಸ್ವಾಮಿ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಮಠಾಧೀಶರು, ಹಾಲಿ ಹಾಗೂ ಮಾಜಿ ಸಚಿವರು, ವಿವಿಧ ಜಿಲ್ಲೆಗಳ ಹಾಲಿ ಮತ್ತು ಮಾಜಿ ಶಾಸಕರು, ರಾಜಕೀಯ ಮುಖಂಡರು ದೂರವಾಣಿ ಮೂಲಕ ಶುಭಾಶಯಗಳನ್ನು ಕೋರಿದರು.

# ಹಾಸನ ತಾಲ್ಲೂಕು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಚೌಡುವಳ್ಳಿ ವಿದ್ಯಾರ್ಥಿಗಳಿಗೆ ಉಚಿತ ಟ್ರ್ಯಾಕ್ ಶೂಟ್ ಸಮವಸ್ತ್ರ ವಿತರಣೆ

## ದೇಶದ ಪ್ರಮುಖ ನಾಯಕರುಗಳೆಲ್ಲಾ ಸರಕಾರಿ ಶಾಲೆಗಳ ಕೊಡುಗೆ : ರಾಜ್ಯ ಉಪಾಧ್ಯಕ್ಷ ಕೆ.ಎಂ. ಶ್ರೀನಿವಾಸ.



ಹಾಸನ : ದೇಶದ ಭವಿಷ್ಯ ಅಡಗಿರುವುದೇ ಸರಕಾರಿ ಶಾಲೆಗಳಲ್ಲಿ. ಏಕೆಂದರೆ ಭಾರತ ದೇಶದ ಪ್ರಮುಖ ನಾಯಕರುಗಳೆಲ್ಲಾ ಸರಕಾರಿ ಶಾಲೆಗಳ ಕೊಡುಗೆ. ಸರಕಾರಿ ಶಾಲೆಗಳು ಮಗುವಿನ ಸರ್ವತೋಮುಖ ಬೆಳವಣಿಗೆಯಲ್ಲಿ ಮಹತ್ತರ ಪಾತ್ರ ವಹಿಸುತ್ತವೆ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ಎಂ. ಶ್ರೀನಿವಾಸ ಅಭಿಪ್ರಾಯಪಟ್ಟರು.

ಅವರು ಹಾಸನ ತಾಲ್ಲೂಕು ಕಟ್ಟಾಯ ಹೋಬಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಚೌಡುವಳ್ಳಿಯ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಉಚಿತ ಟ್ರಾ಼ಕ್ ಶೂಟ್ ಸಮವಸ್ತ್ರಗಳನ್ನು ಕೊಡುಗೆಯಾಗಿ ನೀಡಿ ಮಾತನಾಡಿ ಸರಕಾರಿ ಶಾಲೆಗಳು ಸಮಗ್ರವಾಗಿ ಅಭಿವೃದ್ಧಿಯಾಗಬೇಕು. ತಳಸಮುದಾಯ ಹಾಗೂ ಮಧ್ಯಮ ವರ್ಗದ ಬಹುತೇಕ ಮಕ್ಕಳು ಸರಕಾರಿ ಶಾಲೆಗಳನ್ನೇ ಅವಲಂಬಿಸಿರುವುದರಿಂದ ಈ ಮಕ್ಕಳ ಬೆಳವಣಿಗೆ ಅತ್ಯಗತ್ಯ. ಸರಕಾರಿ ಸೌಲಭ್ಯಗಳ ಜೊತೆಗೆ ಖಾಸಗಿಯಾಗಿ ಸಂಘಸಂಸ್ಥೆಗಳು, ಶಿಕ್ಷಣಾಸಕ್ತರು, ದಾನಿಗಳು ಆಯಾಯ ಊರಿನ ಸರಕಾರಿ ಶಾಲೆಗಳ ಬಗ್ಗೆ ಗಮನಹರಿಸಿದರೂ ಸಾಕು ಮಕ್ಕಳ ಔನತ್ಯಕ್ಕೆ ಪ್ರೇರಣೆ ನೀಡಿದಂತಾಗುತ್ತದೆ. ಸಮಾಜದಿಂದಲೇ ಬೆಳೆದು ತಕ್ಕಮಟ್ಟಿನ ಜೀವನ ನಡೆಸುವ ನಾವುಗಳು ಸಮಾಜಕ್ಕಾಗಿ ಏನನ್ನಾದರೂ ಕೈಲಾದಷ್ಟು ಸಹಾಯ ಮಾಡುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಆಲೋಚಿಸಬೇಕು. ಸರಕಾರಿ ಶಾಲೆಯ ಮಕ್ಕಳು ಯಾವುದೇ ಕಾನ್ವೆಂಟಿನ ಮಕ್ಕಳಿಗೂ ಕಡಿಮೆಯಿಲ್ಲ. ಶೈಕ್ಷಣಿಕವಾಗಿ, ಸಾಂಸ್ಕೃತಿಕವಾಗಿ, ಶಾರೀರಿಕವಾಗಿ, ನೈತಿಕವಾಗಿ ಈ ಮಕ್ಕಳು ಸಾಕಷ್ಟು ಪ್ರಬುದ್ಧರಾಗಿರುತ್ತಾರೆ. ನಮ್ಮ ಗೃಹ ನಿರ್ಮಾಣ ಸಹಕಾರ ಸಂಘ ಹಾಗೂ ವೈಯಕ್ತಿಕವಾಗಿ ಸರಕಾರಿ ಶಾಲೆಗಳ ಶ್ರೇಯೋಭಿವೃದ್ಧಿಗಾಗಿ, ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ನಿರಂತರವಾಗಿ ಕಾರ್ಯೋನ್ಮುಖರಾಗಿದ್ದೇವೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಸರಕಾರಿ ಹಾಗೂ ಅರೆಸರಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ನಿರ್ದೇಶಕ ಯತೀಶ್ ಹಾಗೂ ಪರಮೇಶ್, ಶಾಲಾ ಮುಖ್ಯ ಶಿಕ್ಷಕ ಶಂಕರಾಚಾರ್ಯ, ಹಿರಿಯ ಶಿಕ್ಷಕಿ, ಸರೋಜ ಹಾಗೂ ಸಹ ಶಿಕ್ಷಕಿ ಜೆ.ಸಿ. ಚಂದ್ರಕಲಾ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.






ದಿನಾಂಕ : 07-08-2026

# ಸಿನಿ ಕಹಾನಿ

ಲೈಟ್ಸ್.. ಕ್ಯಾಮೆರಾ.. ಆಕ್ಷನ್..

## ನಟ ಕಾರ್ತಿ – ನಿರ್ದೇಶಕ ಮೋಹನ್ ರಾಜ್
# ಕಾಂಬಿನೇಶನ್ ಹೊಸ ಚಿತ್ರ



ತಮಿಳು ಚಿತ್ರರಂಗದಲ್ಲಿ ಹಲವು ಸೂಪರ್‌ಹಿಟ್ ಸಿನಿಮಾಗಳನ್ನು ನೀಡಿರುವ ನಿರ್ಮಾಣ ಸಂಸ್ಥೆ 'ಪ್ರಿನ್ಸ್ ಪಿಕ್ಚರ್ಸ್', ತನ್ನ ಹೊಸ ಚಿತ್ರವನ್ನು ಅಧಿಕೃತವಾಗಿ ಪ್ರಕಟಿಸಿದೆ. 'ಸಿಂಗಂ 2' ಮತ್ತು 'ಸರ್ದಾರ್' ಯಶಸ್ವಿ ಚಿತ್ರಗಳ ನಿರ್ಮಾಪಕ ಎಸ್. ಲಕ್ಷ್ಮಣ್ ಕುಮಾರ್, ಈ ಬಾರಿ ನಟ ಕಾರ್ತಿ ಹಾಗೂ ನಿರ್ದೇಶಕ ಮೋಹನ್ ರಾಜ್ ಜತೆ ಹೊಸ ಕೌಟುಂಬಿಕ ಚಿತ್ರವನ್ನು ಕೈಗೆತ್ತಿಕೊಂಡಿದ್ದಾರೆ. ಕುಟುಂಬ, ಭಾವನಾತ್ಮಕ ಸನ್ನಿವೇಶಗಳು ಮತ್ತು ನಾಯಕತ್ವದ ಸಾಹಸ ಒಳಗೊಂಡ ವಿಶಿಷ್ಟ ಕಥಾಹಂದರ ಈ ಸಿನಿಮಾದಲ್ಲಿರಲಿದೆ. ತಮ್ಮ ವೃತ್ತಿಜೀವನದಲ್ಲಿ ಕೌಟುಂಬಿಕ ಕಥಾಹಂದರಗಳ ಮೂಲಕವೇ ಅಪಾರ ಯಶಸ್ಸು ಕಂಡಿರುವ ನಟ ಕಾರ್ತಿ, ಇದೀಗ ಈ ಹೊಸ ಸಿನಿಮಾದ ಮೂಲಕ ಮತ್ತೆ ಅಂತಹದ್ದೇ ಶೈಲಿಯತ್ತ ಮುಖ ಮಾಡಿದ್ದಾರೆ. ಎಲ್ಲಾ ವರ್ಗದ ಪ್ರೇಕ್ಷಕರನ್ನು ತಲುಪಿ, ಎಲ್ಲರ ಪ್ರೀತಿಪಾತ್ರರಾಗುವಂತಹ ವಿಶಿಷ್ಟ ಪಾತ್ರದಲ್ಲಿ ಅವರು ಮತ್ತೆ ರಂಜಿಸಲಿದ್ದಾರೆ ಎಂಬುವುದು ಅಭಿಮಾನಿಗಳಲ್ಲಿ ಭಾರಿ ನಿರೀಕ್ಷೆ ಮೂಡಿಸಿದೆ.

'ಸಂತೋಷ್ ಸುಬ್ರಮಣ್ಯಂ', 'ವೇಲಾಯುಧಂ', 'ಥನಿ ಒರುವನ್'ನಂತಹ ಬ್ಲಾಕ್‌ಬಸ್ಟರ್ ಸಿನಿಮಾಗಳನ್ನು ನೀಡಿರುವ ನಿರ್ದೇಶಕ ಮೋಹನ್ ರಾಜ ಅವರಿಗೆ ಚಿತ್ರರಂಗದಲ್ಲಿ 25ನೇ ವರ್ಷದ ಸಂಭ್ರಮ. ಈ ಸಂದರ್ಭದಲ್ಲೇ ಕಾರ್ತಿ ಜೊತೆ ಕೈಜೋಡಿಸಿರುವುದು ಸಿನಿಪ್ರಿಯರಲ್ಲಿ ಮತ್ತು ತಮಿಳು ಚಿತ್ರರಂಗದಲ್ಲಿ ದೊಡ್ಡ ಕುತೂಹಲ ಹುಟ್ಟುಹಾಕಿದೆ. ಶೀಘ್ರದಲ್ಲೇ ಈ ಚಿತ್ರದ ಶೂಟಿಂಗ್ ಆರಂಭವಾಗಲಿದ್ದು, ಚಿತ್ರದಲ್ಲಿ ನಟಿಸಲಿರುವ ಇತರ ಕಲಾವಿದರು, ತಾಂತ್ರಿಕ ಸಿಬ್ಬಂದಿ ಹಾಗೂ ಸಿನಿಮಾ ಬಿಡುಗಡೆಯ ಕುರಿತು ಹೆಚ್ಚಿನ ವಿವರಗಳನ್ನು ಮುಂಬರುವ ವಾರಗಳಲ್ಲಿ ಚಿತ್ರತಂಡ ಹಂಚಿಕೊಳ್ಳಲಿದೆ. ಈ ಸಿನಿಮಾವನ್ನು ಘೋಷಿಸುತ್ತಾ, "ಒಂದು ಹೊಸ ಪಯಣ ಆರಂಭವಾಗಿದೆ" ಎಂದು ನಿರ್ಮಾಣ ಸಂಸ್ಥೆ ಪ್ರಿನ್ಸ್ ಪಿಕ್ಚರ್ಸ್ ಸಂತಸ ಹಂಚಿಕೊಂಡಿದೆ.

## ಡಿಸೆಂಬರ್ 24ಕ್ಕೆ ಅಣ್ಣ ಫ್ರಮ್ ಮೆಕ್ಸಿಕೋ ಮತ್ತೊಮ್ಮೆ
# 'ಬಡವ ರಾಸ್ಕಲ್' ಹಿಟ್ ಕಾಂಬಿನೇಷನ್



ಕನ್ನಡ ಚಿತ್ರರಂಗದ, 'ನಟರಾಕ್ಷಸ' ಡಾಲಿ ಧನಂಜಯ್ ಅಭಿನಯದ ಬಹುನಿರೀಕ್ಷಿತ ಚಿತ್ರ 'ಅಣ್ಣ ಫ್ರಮ್ ಮೆಕ್ಸಿಕೋ' ಬಿಡುಗಡೆ ದಿನಾಂಕ ಅಧಿಕೃತವಾಗಿ ಘೋಷಣೆಯಾಗಿದೆ.

ಕ್ರಿಸ್‌ಮಸ್ ಹಾಗೂ ಹೊಸ ವರ್ಷದ ಸಾಲು ಸಾಲು ರಜಾದಿನಗಳ ಸಂಭ್ರಮವನ್ನು ದುಪ್ಪಟ್ಟು ಮಾಡಲು, ಈ ಸಿನಿಮಾ ಮುಂಬರುವ ಡಿಸೆಂಬರ್ 24ರಂದು ಈ ಚಿತ್ರ ರಾಜ್ಯಾದ್ಯಂತ ಅದ್ದೂರಿಯಾಗಿ ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ. ವರ್ಷಾಂತ್ಯಕ್ಕೆ ಅಭಿಮಾನಿಗಳಿಗೆ ದೊಡ್ಡ ಮಟ್ಟದ ಮನರಂಜನೆ ನೀಡಲು ಸಜ್ಜಾಗಿರುವ ಈ ಸುದ್ದಿ ಡಾಲಿ ಅಭಿಮಾನಿಗಳಲ್ಲಿ ತೀವ್ರ ಕುತೂಹಲ ಹಾಗೂ ಸಂತಸ ಮೂಡಿಸಿದೆ.

ಅಣ್ಣ ಫ್ರಮ್ ಮೆಕ್ಸಿಕೋ ಚಿತ್ರದ ವಿಶೇಷವೆಂದರೆ, 2021ರ ಡಿಸೆಂಬರ್ ತಿಂಗಳಲ್ಲಿ ಬಿಡುಗಡೆಯಾಗಿ ಸೂಪರ್ ಡೂಪರ್ ಹಿಟ್ ಆಗಿದ್ದ 'ಬಡವ ರಾಸ್ಕಲ್' ಸಿನಿಮಾದ ಜೋಡಿ ಈಗ ಬರೋಬ್ಬರಿ ಐದು ವರ್ಷಗಳ ಬಳಿಕ ಮತ್ತೆ ಒಂದಾಗಿದೆ. 'ಬಡವ ರಾಸ್ಕಲ್' ಚಿತ್ರದ ಮೂಲಕವೇ ಡಾಲಿ ಧನಂಜಯ್ ಅವರು ತಮ್ಮ 'ಡಾಲಿ ಪಿಕ್ಚರ್ಸ್' ಬ್ಯಾನರ್ ಅಡಿಯಲ್ಲಿ ನಿರ್ಮಾಪಕರಾಗಿ ಬಡ್ತಿ ಪಡೆದು ಯಶಸ್ಸು ಕಂಡಿದ್ದರು. ಆ ಚಿತ್ರವನ್ನು ನಿರ್ದೇಶಿಸಿದ್ದ ಶಂಕರ್ ಗುರು ಅವರು, ಈಗ ಎರಡನೇ ಬಾರಿಗೆ ಧನಂಜಯ್ ಅವರಿಗೆ 'ಅಣ್ಣ ಫ್ರಮ್ ಮೆಕ್ಸಿಕೋ' ಚಿತ್ರದ ಮೂಲಕ ಆಕ್ಷನ್ ಕಟ್ ಹೇಳಿದ್ದಾರೆ. ಈ ಯಶಸ್ವೀ ಜೋಡಿ ಮತ್ತೆ ಅದೇ ಡಿಸೆಂಬರ್ ತಿಂಗಳಲ್ಲೇ ಒಂದಾಗಿ ಚಿತ್ರಮಂದಿರಕ್ಕೆ ಎಂಟ್ರಿ ನೀಡುತ್ತಿರುವುದು ಸಿನಿಪ್ರಿಯರ ನಿರೀಕ್ಷೆಯನ್ನು ಇಮ್ಮಡಿಗೊಳಿಸಿದೆ.

ಪಕ್ಕಾ ಆಕ್ಷನ್ ಜೊತೆಗೆ ಫ್ಯಾಮಿಲಿ ಎಂಟರ್‌ಟೇನರ್ ಎಲಿಮೆಂಟ್ಸ್ ಹೊಂದಿರುವ ಈ ಸಿನಿಮಾದಲ್ಲಿ ಧನಂಜಯ್ ಜತೆ ನಾಯಕಿಯಾಗಿ ಸ್ಯಾಂಡಲ್‌ವುಡ್‌ನ ಉದಯೋನ್ಮುಖ ನಟಿ ರೀಷ್ಮಾ ನಾಣಯ್ಯ ಜೋಡಿಯಾಗಿದ್ದಾರೆ. ಉಳಿದಂತೆ ರಂಗಾಯಣ ರಘು, ನಾಗಭೂಷಣ ಹಾಗೂ ಪೂರ್ಣಚಂದ್ರ ಮೈಸೂರು ಸೇರಿದಂತೆ ಬಲವಾದ ತಾರಾಗಣವೇ ಚಿತ್ರದಲ್ಲಿದ್ದು, ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ವಿಶೇಷವಾಗಿ ನಟ ಲೂಸ್ ಮಾದ ಯೋಗಿ ಅವರು ಈ ಚಿತ್ರದಲ್ಲಿ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಐರಾ ಫಿಲ್ಮ್ಸ್ ಹಾಗೂ ರಾಯಲ ಸ್ಟುಡಿಯೋಸ್ ಬ್ಯಾನರ್ ಅಡಿ ಅದ್ದೂರಿ ವೆಚ್ಚದಲ್ಲಿ ಈ ಸಿನಿಮಾ ನಿರ್ಮಾಣವಾಗುತ್ತಿದೆ. ಈ ಚಿತ್ರಕ್ಕೆ ವಾಸುಕಿ ವೈಭವ್ ಅವರ ಸಂಗೀತ ನಿರ್ದೇಶನವಿದ್ದು, ಹಿನ್ನೆಲೆ ಸಂಗೀತ ಹಾಗೂ ಹಾಡುಗಳ ಮೇಲೆ ಅಪಾರ ನಿರೀಕ್ಷೆಯಿದೆ. ತಾಂತ್ರಿಕ ಬಳಗದಲ್ಲಿ ಅಜಯ್ ಅವರ ಸಂಕಲನ ಹಾಗೂ ಗುಣ ಅವರ ಕಲಾ ನಿರ್ದೇಶನವಿದ್ದು, ಅದ್ದೂರಿ ಮೇಕಿಂಗ್ ನೊಂದಿಗೆ 'ಅಣ್ಣ ಫ್ರಮ್ ಮೆಕ್ಸಿಕೋ' ಚಿತ್ರವು ಡಿಸೆಂಬರ್ 24ರಂದು ಕನ್ನಡ ಪ್ರೇಕ್ಷಕರ ಮುಂದೆ ಬರಲು ಸಕಲ ರೀತಿಯಲ್ಲಿ ಸಜ್ಜಾಗುತ್ತಿದೆ.

# ಕರ್ಣಾಟಬಲಂ ಅಜೇಯಂ
## ಬಾದಾಮಿ ಬೆಟ್ಟದಲ್ಲಿ ಮೇಳೈಸಿದ ಕಲಾಮೇಳ



ಶಾಸಕ, ನಟ, ನಿರ್ಮಾಪಕ ಸಿ.ಪಿ ಯೋಗೀಶ್ವರ್ ಅವರ ಮಗ ಧ್ಯಾನ್ ಯೋಗೀಶ್ವರ್ ನಾಯಕನಾಗಿ ಚಿತ್ರರಂಗ–ಕ್ಕೆ ಪಾದಾರ್ಪಣೆ ಮಾಡುತ್ತಿರುವ 'ಕರ್ಣಾಟಬಲಂ ಅಜೇಯಂ' ಚಿತ್ರದ ಶೀರ್ಷಿಕೆ ಗೀತೆಯ ಚಿತ್ರೀಕರಣ ಬಾದಾಮಿ ಕೋಟೆಯಲ್ಲಿ ನಡೆಯಿತು.

ನಾಯಕ ಧ್ಯಾನ್ ನೂರಾರು ಕಲಾವಿದರೊಂದಿಗೆ 'ಬಾದಾಮಿ ಸೀಮೆಯಿದು ಎಂತ ಸೊಬಗು ...' ಎಂಬ ಗೀತೆಗೆ ಹೆಜ್ಜೆ ಹಾಕಿದರು. ಈ ಹಾಡಿನಲ್ಲಿ ಜನಪದ ಕಲೆಗಳಾದ ಯಕ್ಷಗಾನ, ನಂದಿ ಕೋಲು, ವೀರಗಾಸೆ ಕುಣಿತ ಸೇರಿದಂತೆ ಹಲವು ನೃತ್ಯತಂಡಗಳು ಭಾಗವಹಿಸಿದ್ದು ವಿಶೇಷವಾಗಿತ್ತು. ತ್ರಿಲೋಕ್ ತ್ರಿವಿಕ್ರಮ್ ಅವರ ಸಾಹಿತ್ಯದ ಈ ಗೀತೆಗೆ ಮೋಹನ್ ಮಾಸ್ಟರ್ ನೃತ್ಯ ಸಂಯೋಜನೆ ಮಾಡುತ್ತಿದ್ದರು. ಈ ಚಿತ್ರಕ್ಕೆ ವಿ. ಹರಿಕೃಷ್ಣ ಅವರ ಸಂಗೀತ ಸಂಯೋಜನೆಯಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಸಿ.ಪಿ. ಯೋಗೀಶ್ವರ್, 'ನಮ್ಮ ಚಿತ್ರದ ಚಿತ್ರೀಕರಣ ಪ್ರಾರಂಭಿಸಿ ತಿಂಗಳಾಗುತ್ತಾ ಬಂದಿದೆ. ನರಗುಂದ, ಬಾದಾಮಿಯ ಸುತ್ತಮುತ್ತ ನಿರಂತರ ಚಿತ್ರೀಕರಣ ಮಾಡುತ್ತಿದ್ದೇವೆ, ಇನ್ನೆರಡು ದಿನ ಚಿತ್ರೀಕರಣ ಮಾಡಿದರೆ ಬಾದಾಮಿ ಭಾಗದ ಚಿತ್ರೀಕರಣ ಮುಗಿಯುತ್ತದೆ. ಆನಂತರ ಹೊಸಪೇಟೆ, ಬೆಂಗಳೂರಿನಲ್ಲಿ ಒಂದೆರಡು ದಿನ ಚಿತ್ರೀಕರಣ ಮಾಡಿದರೆ ಮೊದಲ ಹಂತದ ಚಿತ್ರೀಕರಣ ಪೂರ್ಣವಾಗುತ್ತದೆ.

ನಂತರ ಎರಡನೇ ಹಂತದಲ್ಲಿ ಹಳೆ ಮೈಸೂರು ಭಾಗದಲ್ಲಿ ಚಿತ್ರೀಕರಣ ಮಾಡಲಿದ್ದೇವೆ ಎಂದರು.

ನಾಯಕ ಧ್ಯಾನ್ ಯೋಗೀಶ್ವರ್ ಮಾತನಾಡಿ, 'ಕಳೆದ 20 ದಿನಗಳಿಂದ ಬಾದಾಮಿಯಲ್ಲಿ ಚಿತ್ರೀಕರಣ ನಡೆ–ಯುತ್ತಿದೆ. ಇಲ್ಲಿನ ಜನ ನೀಡುತ್ತಿರುವ ಪ್ರೀತಿಗೆ ತುಂಬಾ ಖುಷಿ ಆಗಿದೆ. ಚಿಕ್ಕ ವಯಸ್ಸಿನಿಂದ ನನಗೆ ನಟ ಆಗುವ ಆಸೆ. ಆದರೆ ತಂದೆಗೆ ಇಷ್ಟ ಇರಲಿಲ್ಲ.

ನಾನು ಯಾವಾಗ ಎತ್ತರವಾಗಿ ಬೆಳೆದೆನೋ ಆಗ ತಂದೆಗೆ ನನ್ನ ಮೇಲೆ ಭರವಸೆ ಬಂತು. ಒಬ್ಬ ನಟನಾಗಿ ನಿಲ್ಲಬೇಕು ಎಂಬ ಆಸೆ ಇದೆ. ಕರ್ಣಾಟಬಲಂ ಅಜೇಯಂ ಚಿತ್ರ ಜನವರಿ 15 ಸಂಕ್ರಾಂತಿ ಹಬ್ಬಕ್ಕೆ ಬಿಡುಗಡೆ ಆಗಲಿದೆ' ಎಂದರು.

## ಮೈಸೂರಲ್ಲಿ ಬಿಡುಗಡೆಯಾಯ್ತು
# "ಲೈಫ್ ಎಲ್ಲಿಂದ್ ಎಲ್ಲಿಗೆ" ಟ್ರೈಲರ್

ಸಾಂಸ್ಕೃತಿಕ ನಗರಿ ಮೈಸೂರಿನ ಯುವ ಪ್ರತಿಭೆಗಳೇ ನಿರ್ಮಿಸಿರುವ ಯೂಥ್ ಫುಲ್ ಚಿತ್ರ 'ಲೈಫ್ ಎಲ್ಲಿಂದ ಎಲ್ಲಿಗೆ'. ಪವಿತ್ರವಾದ ಸ್ನೇಹ ಸಂಬಂಧದ ಸುತ್ತ ನಡೆ–ಯೋ ಕಥಾನಕ ಇರುವ ಈ ಚಿತ್ರದ ಟ್ರೈಲರ್ ಬಿಡುಗಡೆ ಸಮಾರಂಭ ಮೈಸೂರಿನಲ್ಲೇ ನಡೆಯಿತು. ಎಂಟು ವರ್ಷಗಳ ನಂತರ ಭೇಟಿಯಾಗುವ ಮೂವರು ಆತ್ಮೀಯ ಸ್ನೇಹಿತರೆಲ್ಲಾ ಸೇರಿ ಒಂದು ಟ್ರಿಪ್ ಹೋಗುತ್ತಾರೆ. ಆ ಸ್ನೇಹಿತರಲ್ಲಿ ಒಬ್ಬ ತನ್ನ ಕಳೆದುಹೋದ ತಂದೆಯ ಹುಡುಕಾಟದಲ್ಲಿರುತ್ತಾನೆ, ಈ ಸ್ನೇಹಿತರು ಟ್ರಿಪ್ ಹೋದಂಥ ಸಂದರ್ಭದಲ್ಲಿ ಏನೆಲ್ಲ ನಡೆ–ಯುತ್ತೆ ಎಂಬುದನ್ನು ನಿರ್ದೇಶಕ ಅರ್ಜುನ್ ಶಿವನ್ ಅವರು ಅದ್ಭುತವಾದ, ಭಾವನಾತ್ಮಕ ಕಥೆಯೊಂದಿಗೆ ಈ ಚಿತ್ರದಲ್ಲಿ ನಿರೂಪಿಸಿದ್ದಾರೆ.

ಲೈಫ್ ಎಲ್ಲಿಂದ ಎಲ್ಲಿಗೆ ಚಿತ್ರದ ಪ್ರಮುಖ ಪಾತ್ರಗಳಲ್ಲಿ ಲೆನಿನ್, ಮಂಜುನಾಥ್, ಕ್ರಿಶ್, ಅರ್ಜುನ್ ಶಿವನ್ ಅಲ್ಲದೆ ನಾಯಕಿಯಾಗಿ ಅನು ಪ್ರೇಮಾ ಅವರು ನಟಿಸಿದ್ದಾರೆ.

ಕಾಮಿಡಿ ಡ್ರಾಮಾ ಜತೆಗೆ ಭಾವನೆಗಳ ಹೂರಣವಾಗಿ ಮೂಡಿಬಂದಿರುವ ಈ ಗೆಳೆಯರ ಪಯಣದಲ್ಲಿ ವಿವಿಧ ಪಾತ್ರಗಳು ಬಂದು ಹೋಗುತ್ತವೆ. ಈಗಾಗಲೇ ಚಿತ್ರೀಕರಣ, ಪೋಸ್ಟ್ ಪ್ರೊಡಕ್ಷನ್ ವರ್ಕ್ ಮುಗಿಸಿರುವ ಈ ಚಿತ್ರದ ಟೀಸರ್ ಇದೀಗ ಬಿಡುಗಡೆಯಾಗಿದೆ. ವಿಪ್ರ ವೆಂಚರ್ಸ್ ಮೂಲಕ ಮುಳ್ಳೂರು ಗುರುಪ್ರಸಾದ್ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ. ಸದ್ಯ ಚಿತ್ರ ಬಿಡುಗಡೆಗೆ ಸಿದ್ಧವಾಗಿದೆ.




# ಇಂದು "ಬಾಸ್" ತೆರೆಗೆ ಚಿತ್ರಕ್ಕೆ ದರ್ಶನ್ ಸಮ್ಮತಿ ತನುಷ್ ಶಿವಣ್ಣ ನಟನೆ

ಲವ ವಿ. ನಿರ್ದೇಶನದ 'ಬಾಸ್' ಚಿತ್ರಕ್ಕೆ ಸಾಕಷ್ಟು ಅಡೆತಡೆಗಳು ಎದುರಾಗಿ–ತ್ತು. ಚಿತ್ರದ ಬಿಡುಗಡೆಗೆ ತಡೆ ಕೋರಿ ದರ್ಶನ್ ಪತ್ನಿ ವಿಜಯಲಕ್ಷ್ಮಿ ಸಲ್ಲಿಸಿದ್ದ ಮೇಲ್ಮನವಿಯನ್ನು ಹೈಕೋರ್ಟ್ ವಜಾಗೊಳಿಸಿದ್ದು, 'ಬಾಸ್' ಸಿನಿಮಾ ಬಿಡುಗ–'ಡೆಗೆ ಅನುಮತಿ ನೀಡಿದೆ. ಅಲ್ಲದೆ, ದರ್ಶನ್ ಸಹ ಬಾಸ್ ಚಿತ್ರವನ್ನು ಬಿಡುಗ–'ಡೆ ಮಾಡಿಕೊಳ್ಳಲಿ ಎಂದು ತಮ್ಮ ಪರ ವಕೀಲರ ಮುಂದೆ ಹೇಳಿದ್ದಾರೆ. ರಂದು ಬಿಡುಗಡೆಯಾಗುತ್ತಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡ ಮಾತನಾಡಿತು.

ಹೈಕೋರ್ಟ್ ನಲ್ಲಿ ಚಿತ್ರ ಬಿಡುಗಡೆಗೆ ಅವಕಾಶ ಸಿಕ್ಕ ನಂತರ ನಾನು ವಿಜಯಲಕ್ಷ್ಮಿ ಅವರನ್ನು ಸಂಪರ್ಕಿಸಲು ಪ್ರಯತ್ನಿಸಿದೆ. ಅವರ ಪರ ವಕೀಲರು, ವಿಜಯಲಕ್ಷ್ಮಿ ಅವರ ಜತೆ ಮಾತನಾಡಿಸಿದರು.

ನಿಮ್ಮ ಸಿನಿಮಾದಲ್ಲಿ ನಮ್ಮ ಕುಟುಂಬದ ಕುರಿತಾದ ಯಾವುದೇ ಸನ್ನಿವೇಶಗಳಿದ್ದರೆ ನೀವು ಅದನ್ನು ತೆಗೆಯಬೇಕಾಗುತ್ತದೆ ಎಂದವರು ಹೇಳಿದರು. ಅವರ ವಕೀಲರು ಸಿನಿಮಾ ನೋಡಿ, ವಿಜಯಲಕ್ಷ್ಮೀ ಹಾಗೂ ದರ್ಶನ್ ಅವರಿಗೆ ವಿಷಯ ತಿಳಿಸಿದ್ದಾರೆ. ಆಗ ದರ್ಶನ್ ಅವರು ಸುಪ್ರೀಂ ಕೋರ್ಟ್ ಗೆ ಹೋಗುವುದು ಬೇಡ. ಅವರು ತಮ್ಮ ಚಿತ್ರ ಬಿಡುಗ–'ಡೆ ಮಾಡಿಕೊಳ್ಳಲಿ ಎಂದು ತಿಳಿಸಿದ್ದಾರೆ. ವಿಜಯಲಕ್ಷ್ಮಿ ಅವರು ಸಹ ಫೋನ್ ನಲ್ಲಿ ಮಾತನಾಡಿ ಚಿತ್ರ ಬಿಡುಗಡೆ ಮಾಡಿ. ಒಳ್ಳೆಯದಾಗಲಿ ಎಂದು ಹಾರೈಸಿದ್ದಾರೆ. ಇಷ್ಟು ದಿನಗಳ ಅಡೆತಡೆಗಳೆಲ್ಲಾ ಮೀರಿ ನಮ್ಮ ಚಿತ್ರ ಆ. 7 ರಂದು ಬಿಡುಗ–'ಡೆಯಾಗುತ್ತಿದೆ ಎಂದು ಚಿತ್ರದ ನಾಯಕ ಹಾಗೂ ನಿರ್ಮಾಪಕ ತನುಷ್ ಶಿವಣ್ಣ ತಿಳಿಸಿದರು.

ನಿರ್ದೇಶಕ ಲವ ಅವರು ಸಹ ಚಿತ್ರದ ಬಿಡುಗಡೆ ಕುರಿತು ಮಾಹಿತಿ ನೀಡಿ–ದರು. ನಾಯಕಿ ಪಾಯಲ್ ಚಂಗಪ್ಪ ಸೇರಿದಂತೆ ಚಿತ್ರದಲ್ಲಿ ನಟಿಸಿರುವ ಅನೇಕ ಕಲಾವಿದರು ಚಿತ್ರ ಹಾಗೂ ತಮ್ಮ ಪಾತ್ರದ ಕುರಿತು ಮಾತನಾಡಿದರು.



EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.